ನಮ್ಮ ಜನ
NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 54
Volume - 01 Issue - 54
ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269
Title- Code: KARKAN 28269
ಚಿತ್ರದುರ್ಗ
Chitradurga
ದಿನಾಂಕ: 01–09–2023 ಶುಕ್ರವಾರ
Date: 01-09-2023 Friday
ಪುಟ: 4
Page: 4
ಬೆಲೆ : ರೂ.2–00
Price: Rs. 2-00

ಒಳಪುಟದ ಸುದ್ದಿಗಳು
ಗೌರಸಮುದ್ರ ಮಾರಮ್ಮ ದೇವಿ ಹುಂಡಿಯಲ್ಲಿ 9.52 ಲಕ್ಷ ಹಣ ಸಂಗ್ರಹ 2
ಅಕ್ಷಯ ಫುಡ್ ಪಾರ್ಕ್‌ನಲ್ಲಿ ಉದ್ದಿಮೆ ಪ್ರಾರಂಭಿಸಲು ಇರುವ ತೊಡಕು ನಿವಾರಣೆಗೆ ಕ್ರಮ: ಜಿಲ್ಲಾಧಿಕಾರಿ 3
ಅಂಗಪೂಜೆಗಿಂತ ಕಾಯಕ ಶ್ರೇಷ್ಠ ಎಂಬ ತತ್ವ ಸಾರಿದ ನುಲಿಯ ಚಂದಯ್ಯ: ಶಾಸಕ 4

# ನಾರಾಯಣಗುರುಗಳ ಹಾಕಿಕೊಟ್ಟ ಹಾದಿಯಲ್ಲಿ ನಾವೆಲ್ಲರೂ ನಡೆಯೋಣ: ಟಿ.ರಘುಮೂರ್ತಿ

» **ಚಳ್ಳಕೆರೆ**

ಸಮಾಜದ ಹಿತಕ್ಕಾಗಿ ಹಲವಾರು ಮಹಾನ್ ತ್ಯಾಗಿಗಳು, ಯೋಗಿಗಳು ತಮ್ಮದೇಯಾದ ತತ್ವಾದರ್ಶಗಳ ಮೂಲಕ ಧಾರ್ಮಿಕ ಜಾಗೃತಿ ಮೂಡಿಸಲು ನೆರವಾಗಿದ್ದಾರೆ. ಜನರ ಮನದಲ್ಲಿ ಆಳವಾಗಿ ಬೇರೂರಿದ್ದ ಮೌಢ್ಯಗಳನ್ನು ತಮ್ಮದೇಯಾದ ಚಿಂತನೆಗಳಿಂದ ದೂರಗೊಳಿಸಿದ್ದಾರೆ. ಇಂತಹ ಮಹಾನ್ ವ್ಯಕ್ತಿಗಳ ಸಾಲಿನಲ್ಲಿ ಬ್ರಹ್ಮ ಶ್ರೀ ಯೋಗಿ ನಾರಾಯಣಗುರುಗಳು ಅಗ್ರಗಣ್ಯರು ಎಂದು ಶಾಸಕ ಟಿ.ರಘುಮೂರ್ತಿ ತಿಳಿಸಿದರು.

ನಗರದ ತಾಲ್ಲೂಕು ಕಚೇರಿ ಸಭಾಂಗಣದಲ್ಲಿ ತಾಲ್ಲೂಕು ರಾಷ್ಟೀಯ ಹಬ್ಬಗಳ ಆಚರಣಾ ಸಮಿತಿ ಮತ್ತು ತಾಲ್ಲೂಕು ಆರ್ಯಈಡಿಗ ಸಮುದಾಯ ಆಯೋಜಿಸಿದ್ದ ಬ್ರಹ್ಮಶ್ರೀ ಯೋಗಿ ನಾರಾಯಣ ಮತ್ತು ನುಲಿಯ ಚಂದ್ರಯ್ಯ ಜಯಂತಿ ಕಾರ್ಯಕ್ರಮದಲ್ಲಿ ಮಾತನಾಡಿದರು.





ಆರ್ಯಈಡಿಗ ಸಮುದಾಯ ರಾಜ್ಯದಲ್ಲಿ ತನ್ನದೇಯಾದ ಗೌರವ ಹಿರಿಮೆಯನ್ನು ಕಾಪಾಡಿಕೊಂಡಿದೆ.ರಾಜಕೀಯಕ್ಷೇತ್ರದಲ್ಲೂ ಸಹ ವಿಶೇಷ ಶಕ್ತಿಯನ್ನು ಹೊಂದಿದೆ. ನಗರದಲ್ಲಿ ಹಾಸ್ಟೆಲ್ ನಿರ್ಮಿಸಿಕೊಡುವಂತೆ ಮನವಿ ಮಾಡಿದ್ದು ಈ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳುವ ಭರವಸೆ ನೀಡಿದರು.

ಎಲ್ಲಾ ಜನಾಂಗದವರು ಶಿಕ್ಷಣವನ್ನು ಪಡೆಯುವ ಮೂಲಕ ಆರ್ಥಿಕವಾಗಿ ಸಬಲರಾಗಬೇಕು. ಶಿಕ್ಷಣದಿಂದ ಮಾತ್ರ ಸಮಾಜ ಸುಧಾರಣೆ ಸಾಧ್ಯ. ಪೋಷಕರು ಮಕ್ಕಳನ್ನು ಶಿಕ್ಷಣದಿಂದ ವಂಚಿತರಾಗದಂತೆ ನೋಡಿಕೊಳ್ಳಬೇಕು ಎಂದು ಕರೆ ನೀಡಿದರು. ನಾರಾಯಣಗುರುಗಳು ಸಾಮಾಜಿಕ ಕಾಳಜಿಯುಳ್ಳವರಾಗಿದ್ದವರು. ಸಮಾಜದ ಅನಿಷ್ಠ ಪದ್ಧತಿ, ತಾರತಮ್ಯ, ಮೂಢನಂಬಿಕೆ, ಅಸಮಾನತೆಯ ವಿರುದ್ಧ ಧ್ವನಿ ಎತ್ತಿದ್ದರು. ಶೋಷಣೆಯ ವಿರುದ್ಧ ಹಲವಾರು ಹೋರಾಟಗಳನ್ನು ನಡೆಸಿದರು ಎಂದು ಹೇಳಿದ ಅವರು, ಬ್ರಹ್ಮಶ್ರೀ ನಾರಾಯಣಗುರುಗಳ ತತ್ವ ಹಾಗೂ ಆದರ್ಶಗಳನ್ನು ಪ್ರತಿಯೊಬ್ಬರು ಅಳವಡಿಸಿಕೊಳ್ಳಬೇಕು ಎಂದು ಹೇಳಿದರು.

ಉಪವಿಭಾಗಾಧಿಕಾರಿ ಎಂ.ಕಾರ್ತಿಕ್, ತಹಶೀಲ್ದಾರ್ ರೇಹಾನ್ ಪಾಷ, ಅಧ್ಯಕ್ಷ ಸಿ.ಓ.ರವಿಕುಮಾರ್, ನಗರಸಭಾ ಸದಸ್ಯ ಟಿ.ಮಲ್ಲಿಕಾರ್ಜುನ್, ಬಿ.ವಿ.ಸಿರಿಯಣ್ಣ, ಜಿ.ಟಿ.ಶಶಿಧರ, ಇ.ಎನ್.ವೆಂಕಟೇಶ್, ನೇತಾಜಿ ಪ್ರಸನ್ನ, ಪಿಎಸ್ಐ ಸತೀಶ್‌ನಾಯ್ಕ, ದೊಡ್ಡರಂಗಪ್ಪ, ವೆಂಕಟೇಶ್, ಉಮೇಶ್ ಮುಂತಾದವರು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ರಾಷ್ಟ್ರಮಟ್ಟದ ಸ್ಪರ್ಧೆಯಲ್ಲಿ ಹರಿಹರಕ್ಕೆ ಪ್ರಶಸ್ತಿ



» **ದಾವಣಗರೆ**

ಛತ್ತಿಸ್‌ಘಡ ರಾಜ್ಯದ ಬಿಲಯ್ ನಗರದಲ್ಲಿ ಆಗಸ್ಟ್ 25ರಿಂದ 28ರವರೆಗೆ ನಡೆದ 29ನೇ ರಾಷ್ಟ್ರೀಯ ಬೆಂಚ್ ಪ್ರೆಸ್ ಹಾಗು ಡೆಡ್ ಲಿಫ್ಟಿಂಗ್ ಸ್ಪರ್ಧೆಗಳು ಪುರುಷರ, ಮಹಿಳೆಯರ ಹಾಗು ಮಾಸ್ಟರ್ಸ್ ವಿಭಾಗದಲ್ಲಿ ನಡೆದಿದ್ದವು. ಈ ಸ್ಪರ್ದೆಗಳಲ್ಲಿ ಹರಿಹರ ಬ್ರದರ್ಸ್ ಜಿಮ್‌ನಿಂದ 4 ಜನ ಕ್ರೀಡಾಪಟುಗಳು ಕರ್ನಾಟಕ ರಾಜ್ಯವನ್ನು ಪ್ರತಿನಿಧಿಸಿ, 59 ಕೆಜಿ ವಿಭಾಗದಲ್ಲಿ ಖಾಜ ಮೋಹಿನೋದ್ದಿನ್ ಅವರು ಭಾಗವಹಿಸಿ ಬೆಸ್ಟ್ ಬೆಂಚ್ ಪ್ರೆಸರ್ ಅಫ್ ಇಂಡಿಯಾ–2023ರ ಪ್ರಶಸ್ತಿಯನ್ನು ತಮ್ಮದಾಗಿಸಿಕೊಂಡಿದ್ದಾರೆ. ಮುಂದೆ ನಡೆಯಲಿರುವ ಅಂತರರಾಷ್ಟ್ರೀಯ ಬೆಂಚ್ ಸ್ಪರ್ದೆಗಳಿಗೆ ಅಯ್ಕೆಯಾಗಿರುತ್ತಾರೆ. ಇದೇ ಸ್ಪರ್ಧೆಗಳಲ್ಲಿ 73 ಕೆಜಿ ತೂಕದ ವಿಭಾಗದಲ್ಲಿ ಶಹಾಬಾಜ್ ಅವರು ಕಂಚಿನ ಪದಕವನ್ನು ಗೆದ್ದಿದ್ದಾರೆ. ವಿಜೇತ ಕ್ರೀಡಾಪಟುಗಳಿಗೆ ಬ್ರದರ್ಸ್ ಜಿಮ್ನಾ ಸಂಚಾಲಕ, ಅಂತರಾಷ್ಟ್ರೀಯ ದೇಹದಾರ್ಢ್ಯ ಪಟು ಅಕ್ರಂ ಬಾಷ, ತರಬೇತುದಾರ ಮಹಮ್ಮದ್ ರಫೀಕ್ ಸೇರಿದಂತೆ ಎಲ್ಲಾ ಕ್ರೀಡಾಪಟುಗಳು ಶುಭ ಹಾರೈಸಿದ್ದಾರೆ.

**ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ನೂತನ ನಾಮನಿರ್ದೇಶಿತ ಪರಿಷತ್ ಸದಸ್ಯರು ಪ್ರಮಾಣ ವಚನ ಸ್ವಿಕರಿಸಿದ್ದಾರೆ. ಎಂ.ಆರ್ .ಸೀತಾರಾಂ, ಉಮಾಶ್ರೀ, ಸುಧಾಮ್ ದಾಸ್ ಪದಗ್ರಹಣ ಮಾಡಿದ್ದಾರೆ. ಕಾರ್ಯಕ್ರಮದಲ್ಲಿ ಸಿಎಂ ಸಿದ್ದರಾಮಯ್ಯ, ಸಭಾಪತಿ ಹೊರಟ್ಟಿ ಭಾಗಿಯಾಗಿದ್ದರು.**



## ಕೇಂದ್ರ ಸಚಿವ ಎ. ನಾರಾಯಣಸ್ವಾಮಿ ಅವರಿಂದ ವಿದ್ಯುಚ್ಛಕ್ತಿ, ಬಿಎಸ್‌ಎನ್‌ಎಲ್ ಕುರಿತು ಇಂದು ಸಭೆ



» **ಚಿತ್ರದುರ್ಗ**

ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಖಾತೆ ರಾಜ್ಯ ಸಚಿವರು ಹಾಗೂ ಸಂಸದರಾದ ಎ. ನಾರಾಯಣಸ್ವಾಮಿ ಅವರ ಅಧ್ಯಕ್ಷ ತೆಯಲ್ಲಿ ಸೆ. 01 ರಂದು ಮಧ್ಯಾಹ್ನ 02 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲೆಯ ವಿದ್ಯುಚ್ಛಕ್ತಿ ಇಲಾಖೆಯ ಯೋಜನೆಗಳು ಹಾಗೂ ಗ್ರೀನ್ ಎನರ್ಜಿ ಕಾರಿಡಾರ್ ಯೋಜನೆಗಳಿಗೆ ಸಂಬಂಧಿಸಿದಂತೆ ಹಾಗೂ ಮಧ್ಯಾಹ್ನ 03 ಗಂಟೆಗೆ ಜಿಲ್ಲೆಯ ವಿವಿಧ ತಾಲ್ಲೂಕುಗಳಲ್ಲಿ ಬಿ.ಎಸ್.ಎನ್.ಎಲ್. 4ಜಿ ಸ್ಯಾಚುರೇಶನ್ ಯೋಜನೆಗೆ ಸಂಬಂಧಿಸಿದಂತೆ ಸಭೆ ನಡೆಸುವರು ಎಂದು ಅಪರ ಜಿಲ್ಲಾಧಿಕಾರಿಗಳು ತಿಳಿಸಿದ್ದಾರೆ.

**ಪಿಓಪಿ ಮತ್ತು ಲೋಹ ಮಿಶ್ರಿತ ಬಣ್ಣದ ಗಣಪತಿ ವಿಗ್ರಹಗಳ ಬಳಕೆ ನಿಷೇಧ: ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ**

## ಪರಿಸರ ಕಾಳಜಿಯೊಂದಿಗೆ ಗಣೇಶ ಹಬ್ಬ ಆಚರಿಸಿ



» **ಚಿತ್ರದುರ್ಗ**

ಸರ್ಕಾರ ಪಿಓಪಿ ಮತ್ತು ಲೋಹ ಮಿಶ್ರಿತ ಬಣ್ಣದ ಗಣಪತಿ ವಿಗ್ರಹಗಳ ಬಳಕೆಯನ್ನು ಸಂಪೂರ್ಣವಾಗಿ ನಿಷೇಧಿಸಿದೆ. ಇವುಗಳ ವಿಸರ್ಜನೆಯಿಂದ ಜಲಮೂಲಗಳು ಮಲಿನವಾಗುತ್ತವೆ, ಹೀಗಾಗಿ ಸಾರ್ವಜನಿಕರು ಪರಿಸರ ಕಾಳಜಿಯೊಂದಿಗೆ ಗಣೇಶ ಹಬ್ಬವನ್ನು ಆಚರಿಸಬೇಕು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಹೇಳಿದರು.

ಪರಿಸರ ಸ್ನೇಹಿ ಗಣೇಶ ಚತುರ್ಥಿ ಆಚರಿಸುವ ಕುರಿತು ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ಜರುಗಿದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ನಿಷೇಧಿತ ಗಣಪತಿ ವಿಗ್ರಹಗಳ ತಯಾರಿಕೆ ಹಾಗೂ ಮಾರಾಟ ಮಾಡುವುದನ್ನು ಪರಿಸರ ಅಧಿಕಾರಿಗಳು ಹಾಗೂ ಪೊಲೀಸ್ ಅಧಿಕಾರಿಗಳು ತಡೆಗಟ್ಟಬೇಕು. ನಿಷೇಧಿತ ಗಣೇಶ ಮೂರ್ತಿಗಳ ಮಾರಾಟದ ಬಗ್ಗೆ ಪರಿಸರ ಅಧಿಕಾರಿಗಳು ನಿಗಾ ವಹಿಸಬೇಕು, ಪ್ರಾದೇಶಿಕ ಸಾರಿಗೆ ಅಧಿಕಾರಿಗಳು ವಿವಿಧ ಊರು ಹಾಗೂ ರಾಜ್ಯಗಳಿಂದ ಜಿಲ್ಲೆಗೆ ವಾಹನಗಳ ಮೂಲಕ ಪಿಓಪಿ ಗಣಪತಿ ವಿಗ್ರಹಗಳ ಸಾಗಾಣಿಕೆ ತಡೆಯಲು ಚೆಕ್ ಪೋಸ್ಟ್‌ಗಳಲ್ಲಿ ಬಿಗಿ ಭದ್ರತೆ ಕೈಗೊಳ್ಳಬೇಕು. ನಗರ, ಸ್ಥಳೀಯ ಸಂಸ್ಥೆಗಳು ಹಾಗೂ ಗ್ರಾಮ ಪಂಚಾಯಿತಿಗಳು ಪಿಓಪಿ ಗಣಪತಿ ಮಾರಾಟ ಮಾಡುವ ಅಂಗಡಿಗಳಿಗೆ ಲೈಸೆನ್ಸ್ ನೀಡಬಾರದು. ಅಕ್ರಮವಾಗಿ ನಿಷೇಧಿತ ಗಣಪತಿ ವಿಗ್ರಹಗಳ ಮಾರಾಟ ಕಂಡುಬಂದರೆ ತಕ್ಷಣವೇ ಅಂತಹ ಅಂಗಡಿಗಳ ಮೇಲೆ ದಾಳಿ ಮಾಡಿ ವಿಗ್ರಹಗಳನ್ನು ವಶಪಡಿಸಿಕೊಂಡು ಕೇಸು ದಾಖಲಿಸಬೇಕು, ಅಲ್ಲದೆ ಸುಪರ್ದಿಗೆ ಪಡೆದ ನಿಷೇಧಿತ ವಿಗ್ರಹಗಳನ್ನು ತ್ಯಾಜ್ಯ ವಿಲೇವಾರಿ ಘಟಕಗಳಿಗೆ ಸಾಗಿಸಿ ನಿಯಮಾನುಸಾರ ವಿಲೇವಾರಿ ಮಾಡಬೇಕು ಎಂದರು.

**ಸಾರ್ವಜನಿಕ ಗಣಪತಿ ಪ್ರತಿಷ್ಠಾಪನೆಗೆ ಅನುಮತಿ ಕಡ್ಡಾಯ:** ಸಾರ್ವಜನಿಕವಾಗಿ ಗಣೇಶ ವಿಗ್ರಹಗಳನ್ನು ಪ್ರತಿಷ್ಠಾಪಿಸುವ ಪ್ರತಿಯೊಬ್ಬರು ಸಂಬಂಧಪಟ್ಟ ಸ್ಥಳೀಯ ಸಂಸ್ಥೆಗಳು, ಪೊಲೀಸ್, ಬೆಸ್ಕಾಂ ಹಾಗೂ ಅಗ್ನಿಶಾಮಕ ಇಲಾಖೆಗಳಿಂದ ಅನುಮತಿ ಪಡೆದುಕೊಳ್ಳುವುದು ಕಡ್ಡಾಯವಾಗಿದೆ. ಅನುಮತಿ ನೀಡುವ ಸಂದರ್ಭದಲ್ಲಿ ನಿಷೇದಿತ ಪಿಓಪಿ ಹಾಗೂ ಆಯಿಲ್ ಪೇಂಟಿಗ್ ಗಣೇಶ ಮೂರ್ತಿಗಳು, ಪ್ಲಾಸ್ಟಿಕ್ ವಸ್ತುಗಳನ್ನು ಬಳಸದಂತೆ ನಿರ್ಬಂಧ ಹೇರಬೇಕು. ರಾತ್ರಿ 10 ಗಂಟೆಯಿಂದ ಬೆಳಗಿನ 6 ಗಂಟೆಯ ವರೆಗೆ ಧ್ವನಿ ವರ್ಧಕಗಳ ಬಳಕೆ ನಿಷೇಧಿಸಬೇಕು. ಯಾವುದೇ ಕಾರಣಕ್ಕೂ ಕೋಮು ಸೌಹಾರ್ದತೆಗೆ ಧಕ್ಕೆ ಬರದಂತೆ ನೋಡಿಕೊಳ್ಳಬೇಕು. ಪ್ರತಿಯೊಂದು ಹಂತದಲ್ಲೂ ಶಾಂತಿ ಸಭೆಗಳನ್ನು ಪೊಲೀಸ್ ಅಧಿಕಾರಿಗಳು ನಡೆಸಬೇಕು ಎಂದು ಅಪರ ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

**ನಿಗಧಿತ ಸ್ಥಳದಲ್ಲಿ ಮೂರ್ತಿ ವಿಸರ್ಜನೆಗೆ ಅವಕಾಶ:** ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿ, ಗ್ರಾಮ ಪಂಚಾಯಿತಿಗಳಲ್ಲಿ ಗಣೇಶ ಮೂರ್ತಿ ವಿಜಸರ್ಜನೆಗೆ ಸ್ಥಳ ಗುರುತಿಸಬೇಕು. ಕೆರೆ, ಕಲ್ಯಾಣಿಗಳಲ್ಲಿ ನೇರವಾಗಿ ಮೂರ್ತಿಗಳನ್ನು ವಿಸರ್ಜಿಸಲು ಅವಕಾಶ ನೀಡಬೇಡಿ. ತಾತ್ಕಾಲಿಕವಾಗಿ ವಿಸರ್ಜನೆಗೆ ಪ್ರತ್ಯೇಕವಾಗಿ ಕೃತಕ ಟ್ಯಾಂಕ್‌ಗಳನ್ನು ನಿರ್ಮಿಸಬೇಕು. ಸ್ಥಳದಲ್ಲಿ ಹೂವು, ಹಣ್ಣು, ಬಾಳೆಕಂಬ ಮಾವಿನ ತೋರಣ ಸೇರಿದಂತೆ ಇತರೆ ಹಸಿ ತ್ಯಾಜ್ಯಗಳನ್ನು ಸಂಗ್ರಹಿಸಲು ವ್ಯವಸ್ಥೆ ಕಲ್ಪಿಸಬೇಕು, ನೀರಿನಲ್ಲಿ ಮೂರ್ತಿಗಳೊಂದಿಗೆ ಇವುಗಳನ್ನು ವಿಸರ್ಜಿಸುವುದನ್ನು ತಡೆಗಟ್ಟಬೇಕು, ಗಣೇಶ ಹಬ್ಬದ ನಂತರ ಮೂರ್ತಿ ವಿಸರ್ಜಿಸುವ ದಿನಗಳಂದು ಸಂಚಾರಿ ಟ್ಯಾಂಕರ್ ಮೂಲಕ ನಗರದ ಓಣಿಗಳಿಗೆ ತೆರಳಿ ಮೂರ್ತಿ ವಿಸರ್ಜನೆಗೆ ಅವಕಾಶ ನೀಡಬೇಕು, ಈ ಬಗ್ಗೆ ನಗರ, ಸ್ಥಳೀಯ ಸಂಸ್ಥೆಗಳು ಸಾಕಷ್ಟು ಮೊದಲೇ ಪ್ರಚಾರ ನೀಡಬೇಕು ಎಂದು ಅಧಿಕಾರಿಗಳಿಗೆ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಸೂಚನೆ ನೀಡಿದರು.ಸಭೆಯಲ್ಲಿ ಪೊಲೀಸ್ ಇನ್ಸ್‌ಪೆಕ್ಟರ್ ಟಿ.ಆರ್.ನಯಿಂ ಅಹಮದ್ ಸೇರಿದಂತೆ ಎಲ್ಲಾ ನಗರಸಭೆಯ ಪರಿಸರ ಅಭಿಯಂತರ ಜಾಫರ್, ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.



## ಫಾಸ್ಟ್ ನ್ಯೂಸ್

### ರಾಜ್ಯ ಒಕ್ಕಲಿಗ ಸಂಘದ ಸದಸ್ಯತ್ವ ನೋಂದಣಿ ಅವಧಿ ವಿಸ್ತರಣೆ

ಬೆಂಗಳೂರು: ರಾಜ್ಯ ಒಕ್ಕಲಿಗ ಸಂಘದ ಸದಸ್ಯತ್ವ ನೋಂದಣಿ ಅವಧಿ ವಿಸ್ತರಣೆ ಮಾಡಲಾಗಿದ್ದು, ಸೆಪ್ಟೆಂಬರ್ 1ರಿಂದ ನವೆಂಬರ್ 30ರವರೆಗೆ ಅರ್ಜಿ ಸಲ್ಲಿಸಲು ಅವಕಾಶ ನೀಡಲಾಗಿದೆ ಎಂದು ರಾಜ್ಯ ಒಕ್ಕಲಿಗ ಸಂಘ ಮಾಹಿತಿ ನೀಡಿದೆ. ಇಂದು ಸಂಘದ ಸದಸ್ಯತ್ವ ನೋಂದಣಿಯ ಅರ್ಜಿ ಸಲ್ಲಿಕೆಗೆ ಕೊನೆ ದಿನ ಆಗಿತ್ತು. ಮತ್ತೆ ಮೂರು ತಿಂಗಳ ಕಾಲ ಸದಸ್ಯತ್ವಕ್ಕಾಗಿ ಅರ್ಜಿ ಸಲ್ಲಿಸಲು ಅವಕಾಶ ಕೊಟ್ಟಿದ್ದೇವೆ. ಈವರೆಗೂ 56,889 ಅರ್ಜಿಗಳು ಸಲ್ಲಿಕೆಯಾಗಿವೆ ಎಂದರು.

### ರಾಜ್ಯ ಸರ್ಕಾರದ ವಿರುದ್ಧ ಸೆ.8ರಂದು ಪ್ರತಿಭಟನೆ; ಬಿಜೆಪಿ ರೈತ ಮೋರ್ಚಾದ ರಾಜ್ಯಾಧ್ಯಕ್ಷ ಕಡಾಡಿ

ಬೆಂಗಳೂರು: ರೈತ ವಿರೋಧಿ ನೀತಿ ವಿರೋಧಿಸಿ ಎಲ್ಲಾ ತಾಲೂಕು ಕೇಂದ್ರಗಳಲ್ಲಿ ಸೆಪ್ಟೆಂಬರ್ 8ರಂದು ಪ್ರತಿಭಟನೆ ನಡೆಸಲಾಗುವುದು ಎಂದು ಬಿಜೆಪಿ ರೈತ ಮೋರ್ಚಾದ ರಾಜ್ಯಾಧ್ಯಕ್ಷ ಈರಣ್ಣ ಕಡಾಡಿ ಹೇಳಿದ್ದಾರೆ. 'ರಾಜ್ಯ ಸರ್ಕಾರಕ್ಕೆ ರೈತರ ಮೇಲೆ ಯಾಕಿಷ್ಟು ದ್ವೇಷ, ದ್ವೇಷ ಮಾಡಲು ರಾಜ್ಯದ ಜನರು ನಿಮಗೆ ಅಧಿಕಾರ ಕೊಟ್ಟಿಲ್ಲ. ರೈತರಿಗೆ ಸಂಬಂಧಿಸಿದ ಯೋಜನೆಗಳನ್ನು ತಡೆಹಿಡಿಯಲಾಗಿದೆ. ರೈತ ವಿರೋಧಿ ನೀತಿ ವಿರೋಧಿಸಿ ಪ್ರತಿಭಟನೆ ಮಾಡಲಾಗುವುದು ಎಂದಿದ್ದಾರೆ.

### ಪಂಚಮಸಾಲಿ ಸಮಾಜಕ್ಕೆ ಮೀಸಲಾತಿಗೆ ಆಗ್ರಹಿಸಿ ಮತ್ತೆ ಹೋರಾಟ; ಸಭೆ

ಚಿಕ್ಕೋಡಿ: ಪಂಚಮಸಾಲಿ ಸಮಾಜಕ್ಕೆ 2ಂ ಮೀಸಲಾತಿಗೆ ಆಗ್ರಹಿಸಿ ಮತ್ತೆ ಹೋರಾಟ ಮಾಡುವ ಹಿನ್ನೆಲೆ ಇಂದು ಕೂಡಲಸಂಗಮ ಪಂಚಮಸಾಲಿ ಪೀಠದ ಜಗದ್ಗುರು ಬಸವ ಜಯಮೃತ್ಯುಂಜಯ ಶ್ರೀ ನೇತೃತ್ವದಲ್ಲಿ ಬೆಳಗಾವಿ ಜಿಲ್ಲೆಯ ಚಿಕ್ಕೋಡಿ ಪ್ರವಾಸಿ ಮಂದಿರದಲ್ಲಿ ಸಭೆ ಮಾಡಲಾಗುತ್ತಿದೆ. ಸೆಪ್ಟೆಂಬರ್ 3 ರಂದು ನಿಪ್ಪಾಣಿ ಬಳಿ ರಾಷ್ಟ್ರೀಯ ಹೆದ್ದಾರಿ 4ರಲ್ಲಿ ಸಾಮೂಹಿಕ ಇಷ್ಟಲಿಂಗ ಪೂಜೆ ನೆರವೇರಿಸಿ ಪ್ರತಿಭಟನೆ ನಡೆಸಲು ನಿರ್ಧಾರ ಮಾಡಲಾಗಿದೆ.

### ಕ್ಷೇತ್ರಗಳಲ್ಲಿ ಪ್ರವಾಸ ಮಾಡಿ ಎಂದು ಬಿಜೆಪಿ ಶಾಸಕರಿಗೆ ಸೂಚನೆ

ಬೆಂಗಳೂರು: ಇಂದು ಬಿಜೆಪಿ ರಾಷ್ಟ್ರೀಯ ಸಂಘಟನಾ ಪ್ರಧಾನ ಕಾರ್ಯದರ್ಶಿ ಬಿ.ಎಲ್ ಸಂತೋಷ್ ನೇತೃತ್ವದಲ್ಲಿ, ಬಿಜೆಪಿ ರಾಜ್ಯ ಕಚೇರಿಯಲ್ಲಿ ಮತದಾರರ ಜಾಗೃತಿ ಅಭಿಯಾನ ಕುರಿತು ಸಭೆ ಹಮ್ಮಿಕೊಳ್ಳಲಾಗಿತ್ತು. ಇದೀಗ ಆ ಸಭೆ ಮುಕ್ತಾಯವಾಗಿದ್ದು, ಸೆಪ್ಟೆಂಬರ್ 6 ರಿಂದ ಸಂಸದರು, ಶಾಸಕರು ಕ್ಷೇತ್ರಗಳಲ್ಲಿ ಪ್ರವಾಸ ಮಾಡಿ ಸಂಘಟನೆ ಮಾಡಲು ಸಭೆಯಲ್ಲಿ ಸಂತೋಷ್ ಸೂಚನೆ ನೀಡಿದ್ದಾರೆ.

### ನಿಮ್ಮೆಲ್ಲರ ಆಶೀರ್ವಾದ, ಬೆಂಬಲ, ಪ್ರಧಾನಿ ವಿಶೇಷ ಆಸಕ್ತಿಯಿಂದ ಕನಸು ನನಸು -ಬಿಎಸ್‌ವೈ

ಶಿವಮೊಗ್ಗದಲ್ಲಿ ಏರ್‌ಪೋರ್ಟ್ ಆಗಬೇಕೆಂದು ಬಹಳ ವರ್ಷಗಳ ಕನಸಿತ್ತು. ನಿಮ್ಮೆಲ್ಲರ ಆಶೀರ್ವಾದ, ಬೆಂಬಲ, ಪ್ರಧಾನಿ ವಿಶೇಷ ಆಸಕ್ತಿಯಿಂದ ನನಸು. ಮುಂದಿನ ದಿನಗಳಲ್ಲಿ ಶಿವಮೊಗ್ಗಕ್ಕೆ ಕೈಗಾರಿಕೆ ಬರುವುದರಲ್ಲಿ ಸಂಶಯವಿಲ್ಲ. ಶಿವಮೊಗ್ಗ ಏರ್ ಪೋರ್ಟ್‌ನಲ್ಲಿ ನೈಟ್ ಲ್ಯಾಂಡಿಂಗ್ ಕೂಡ ಆರಂಭವಾಗಲಿದೆ. ಕೆಲವೇ ವರ್ಷಗಳಲ್ಲಿ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣವಾಗಲಿದೆ. ಶಿವಮೊಗ್ಗ ನಗರಕ್ಕೆ ಏನೇನು ಬೇಕೋ ಅದನ್ನೆಲ್ಲ ಮಾಡಿದ ತೃಪ್ತಿ ನನಗಿದೆ ಎಂದು ಶಿವಮೊಗ್ಗದಲ್ಲಿ ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ತಿಳಿಸಿದರು.

### ಸರ್ವೆಯರ್ ರಮೇಶಪ್ಪ ಲೋಕಾ ಬಲೆಗೆ

ಚಿಕ್ಕಮಗಳೂರು ತಾಲೂಕು ಕಚೇರಿಯಲ್ಲಿ ಲಂಚ ಪಡೆಯುವಾಗ ಕಂದಾಯ ಇಲಾಖೆಯ ಸರ್ವೆಯರ್ ರಮೇಶಪ್ಪ ಬಲೆಗೆ ಬಿದ್ದಿದ್ದಾರೆ. ಜಮೀನಿನ ಸರ್ವೆಗಾಗಿ ಒಂದು ಲಕ್ಷ ರೂ. ಲಂಚ ಕೇಳಿದ್ದ ರಮೇಶಪ್ಪ 3 ಸಾವಿರ ಲಂಚ ಪಡೆಯುವಾಗ ಸಿಕ್ಕಿಬಿದ್ದಾರೆ. ಚಿಕ್ಕಮಗಳೂರು ಲೋಕಾಯುಕ್ತ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದೆ.

### ಕಾವೇರಿ ನೀರು ನಿಲ್ಲಿಸಿ: ಮಾಜಿ ಸಿಎಂ ಬೊಮ್ಮಾಯಿ

ತಮಿಳುನಾಡಿಗೆ ಕಾವೇರಿ ನೀರು ಹರಿಸುವುದನ್ನು ಸರ್ಕಾರ ನಿಲ್ಲಿಸಬೇಕು ಎಂದು ಟ್ವೀಟ್ ಮೂಲಕ ಮಾಜಿ ಸಿಎಂ ಬಸವರಾಜ ಬೊಮ್ಮಾಯಿ ಆಗ್ರಹಿಸಿದ್ದಾರೆ.

# ದ್ವೇಷವನ್ನು ಪ್ರೀತಿಯಿಂದ ಗೆಲ್ಲಬೇಕು: ತಾರಿಣಿ

» ಚಿತ್ರದುರ್ಗ



ಸಮನ್ವಯ ಮನುಷ್ಯನ ವಿಕಾಸಕ್ಕೆ ಅನುಮಾಡಿಕೊಡುವುದರಿಂದ ಸಮನ್ವಯ ತತ್ವಗಳನ್ನು ವೈರುದ್ಯದ ನೆಲೆಯಲ್ಲಿ ನೋಡಬೇಕು ಎಂದು ಸರ್ಕಾರಿ ಕಲಾ ಕಾಲೇಜು ಸ್ನಾತಕೋತ್ತರ ವಿಭಾಗದ ಸಹ ಪ್ರಾಧ್ಯಾಪಕಿ ಶ್ರೀಮತಿ ತಾರಿಣಿ ಶುಭದಾಯಿನಿ ಹೇಳಿದರು.

ಮುರುಘಾಮಠ ಬಸವಕೇಂದ್ರದ ವತಿಯಿಂದ ಪ್ರತಿ ವರ್ಷದಂತೆ ಈ ಬಾರಿಯ ನಡೆಯುತ್ತಿರುವ ಶ್ರಾವಣ ಮಾಸದ ನಿತ್ಯಕಲ್ಯಾಣ ಮನೆ ಮನೆಗೆ ಚಿಂತನ ಕಾರ್ಯಕ್ರಮದ ನಿಮಿತ್ತ ಜಿಲ್ಲಾ ವೀರಶೈವ ಲಿಂಗಾಯತ ಹೇಮರೆಡ್ಡಿ ಮಲ್ಲಮ್ಮ ಸಮಾಜದಲ್ಲಿ ಬುಧವಾರ ಹಮ್ಮಿಕೊಳ್ಳಲಾಗಿದ್ದ ಸಮನ್ವಯ ದೃಷ್ಟಿ ಎಂಬ ವಿಷಯ ಕುರಿತು ಉಪನ್ಯಾಸ ನೀಡಿದರು.

ಎಲ್ಲಾ ಕ್ಷೇತ್ರಗಳಲ್ಲಿಯೂ ಸಮನ್ವಯ ಎನ್ನುವ ಪದ ಬಳಕೆಯಲ್ಲಿದೆ. ತತ್ವವಿಚಾರಗಳು, ವೈರುದ್ಯಗಳಿಂದ ಸಮನ್ವಯ ಕೂಡಿದೆ. ತತ್ವ ಚಿಂತನೆ, ಜಿಜ್ಞಾಸೆಯಲ್ಲಿ ಸಮನ್ವಯ ಒಂದು. ಬುದ್ದ ವೈರುದ್ಯಗಳನ್ನು ನೀಗಿಕೊಳ್ಳಲು ಧ್ಯಾನ ಮಾಡುತ್ತ ಕುಳಿತ. ಮಧ್ಯಮ ಮಾರ್ಗ ಬುದ್ದ ಸಾಧಿಸಿದ ಸಮನ್ವಯ ತತ್ವ. ಸತ್ಯದ ದರ್ಶನ ಆಗಬೇಕು. ದ್ವೇಷವನ್ನು ಪ್ರೀತಿಯಿಂದ ಗೆಲ್ಲಬೇಕು. ಆಗ ಮಾತ್ರ ಸಮನ್ವಯ ಸಾಧಿಸಬಹುದು ಎಂದು ತಿಳಿಸಿದರು.

ಸಮತೋಲನ ಸಾಧಿಸುವುದು ದೊಡ್ಡ ಸವಾಲು ಎಂದು ಬುದ್ದ ಹೇಳಿದ್ದಾನೆ. ರಾಜಕೀಯ ಎನ್ನುವುದು ಮನೆ ಮನಗಳಲ್ಲಿ ಹೊಕ್ಕಿದೆ. ರಾಜಕೀಯಕ್ಕೂ ಮೋಕ್ಷ ಮಾರ್ಗಕ್ಕೂ ಯಾವ ರೀತಿ ಸಂಬಂಧ ಇದೆ ಎನ್ನುವುದನ್ನು ತೋರಿಸಿದವರು ಗಾಂಧಿ.

ವಿರೋಧಾಭಾಸದ ಜೊತೆ ಗಾಂಧಿ ದೊಡ್ಡ ಸಮನ್ವಯಕಾರರಾಗಿ ಕೆಲಸ ಮಾಡಿದ್ದಾರೆ. ವೈರುದ್ದಗಳು ಭಾರತದಲ್ಲಿ ಸರ್ವೆ ಸಾಮಾನ್ಯ. ಸಮನ್ವಯತೆ ಬೇಕು. ಅದೊಂದು ಶಕ್ತಿ. ಸಮನ್ವಯತೆ ಎನ್ನುವುದು ಮೌಲ್ಯ. ಅದನ್ನು ಗಾಂಧಿಯಲ್ಲಿ ಕಾಣಬಹುದು. ಸಂವಿಧಾನ ಕೂಡ ಸಮನ್ವಯಕಾರನ ರೂಪದಲ್ಲಿ ನಿಂತಿರುವ ದೊಡ್ಡ ಶಕ್ತಿ. ಸಮನ್ವಯ ಎನ್ನುವುದು ನಮ್ಮ ನಿಲುವಾಗಿರಬೇಕು. ಸಂವಿಧಾನವನ್ನು ಬಾಯಲ್ಲಿ ಪಠಿಸುತ್ತೇವೆ. ಯಾರು ಪಾಲನೆ ಮಾಡುತ್ತಿಲ್ಲ. ತಾಳ್ವಿಕೆ ಎಲ್ಲಿಯವರೆಗೂ ಜೀವನ ಮೌಲ್ಯವಾಗಿ ಬರುವುದಿಲ್ಲವೋ ಅಲ್ಲಿಯತನಕ ರಾಜಕೀಯ, ಆಧ್ಯಾತ್ಮವನ್ನು ಅರ್ಥಮಾಡಿಕೊಳ್ಳಲು ಆಗುವುದಿಲ್ಲ ಎಂದರು.

ನಿಜವಾದ ಸಮನ್ವಯಕಾರರು ಒಳತಂತುಗಳಲ್ಲಿ ಬೆಸೆಯಬೇಕು. ಸಮನ್ವಯದ ನೆಲೆಯಲ್ಲಿ ಬದುಕನ್ನು ರೂಪಿಸಿಕೊಳ್ಳಬಹುದು ಎಂದು ಹೇಳಿದರು.

ತಿಪ್ಪೇರುದ್ರಸ್ವಾಮಿ ಮಾತನಾಡಿ ಯುಗ ಯುಗಗಳಿಂದಲೂ ಮಾನವ ಈ ಭೂಮಿ ಮೇಲೆ ಜೀವನ ನಡೆಸಿದ್ದಾನೆ. ಶ್ರೇಷ್ಠ-ಕನಿಷ್ಠ ಎನ್ನುವುದು ಕೇವಲ ಮನುಷ್ಯನಲ್ಲಿ ಅಲ್ಲ. ಪ್ರಾಣಿ, ಪಕ್ಷಿಗಳಲ್ಲಿಯೂ ಇದೆ. ಸ್ತ್ರೀ-ಪುರುಷರ ನಡುವೆ ದೊಡ್ಡ ಕಂದಕವಿದೆ. ಸುಖ-ದುಃಖ, ಪಾಪ-ಪುಣ್ಯದ ನಡುವೆ ಸಮನ್ವಯತೆ ಬೇಕು. ಕಾಲ ನಿರ್ಣಯವಿಲ್ಲದೆ ಯಾವ ಕಾರ್ಯವನ್ನು ಮನುಷ್ಯ ಮಾಡುತ್ತಿಲ್ಲ. ಅಷ್ಟೊಂದು ಮೂಢನಂಬಿಕೆಗೆ ಬಲಿಯಾಗಿದ್ದಾನೆ. ಆಧ್ಯಾತ್ಮ ಸಾಧಿಸಲು ಸಮನ್ವಯ ಅಡ್ಡ ಬರುವುದಿಲ್ಲ. ವಚನ ಚಳುವಳಿ ಹುಟ್ಟಿದ್ದೆ ಸಮನ್ವಯ ದೃಷ್ಠಿಯಿಂದ ಎಂದು ತಿಳಿಸಿದರು.

ಮುರುಘಮಠದ ಬಸವಪ್ರಭು ಸ್ವಾಮೀಜಿ ಸಾನಿಧ್ಯ ವಹಿಸಿದ್ದರು.

ಬಸವೇಶ್ವರ ಆಸ್ಪತ್ರೆಯ ಡಾ.ಪಾಲಾಕ್ಷ, ಲಾಯರ್ ವಿಶ್ವನಾಥ್ ವೇದಿಕೆಯಲ್ಲಿದ್ದರು.

# ಗೌರಸಮುದ್ರ ಮಾರಮ್ಮ ದೇವಿ ಹುಂಡಿಯಲ್ಲಿ 9.52 ಲಕ್ಷ ಹಣ ಸಂಗ್ರಹ

» ಚಳ್ಳಕೆರೆ



ರಾಜ್ಯದ ಪ್ರಸಿದ್ದ ಜಾತ್ರೆಗಳಲ್ಲಿ ಒಂದಾದ ಜಿಲ್ಲೆಯ ತಳಕು ಹೋಬಳಿಯ ಗೌರಸಮುದ್ರ ಶ್ರೀಮಾರಮ್ಮ ದೇವಿ ಜಾತ್ರೆ ಸೆ.18ರಿಂದ ಪ್ರಾರಂಭವಾಗಲಿದ್ದು, ದೇವಸ್ಥಾನದ ಆಡಳಿತ ಮಂಡಳಿ ಹಾಗೂ ತಹಶೀಲ್ದಾರ್ ನೇತೃತ್ವದಲ್ಲಿ ದೇವಸ್ಥಾನದ ಹುಂಡಿ ಹಣ ಏಣಿಕೆ ಕಾರ್ಯ ಚುರುಕಿನಿಂದ ನಡೆಯಿತು.

ಮುಜುರಾಯಿ ಮತ್ತು ತಾಲ್ಲೂಕು ದಂಡಾಧಿಕಾರಿ ತಹಶೀಲ್ದಾರ್ ರೇಹಾನ್ ಪಾಷ ಮತ್ತು ಅಧಿಕಾರಿಗಳ ತಂಡ ಬೆಳಗ್ಗೆಯಿಂದಲೇ ದೇವರ ಹುಂಡಿಯನ್ನು ತೆರೆದು ಹಣವನ್ನು ಏಣಿಸಲಾರಂಭಿಸಿದರು. ಸುಮಾರು ನಾಲ್ಕು ಗಂಟೆಗಳಿಗೂ ಹೆಚ್ಚು ಕಾಲ ದೇವರ ಹುಂಡಿಯ ಹಣ ಏಣಿಕೆ ಕಾರ್ಯ ನಡೆಯಿತು. ಈ ಪೈಕಿ 8,91,680 ನೋಟು, 61.215 ಚಿಲ್ಲರೆ ಒಟ್ಟು 9,52,895ರೂ ಹಣ ಹುಂಡಿಯಲ್ಲಿ ಸಂಗ್ರಹವಾಗಿತ್ತು.

ಗ್ರಾಮ ಪಂಚಾಯಿತಿ ಅಧ್ಯಕ್ಷ ಓಬಣ್ಣ, ಸದಸ್ಯರಾದ ಶಶಿಕುಮಾರ್, ಮಲ್ಲಯ್ಯ, ತಿಮ್ಮಾರೆಡ್ಡಿ, ಸಂಜಯ್‌ಗೌಡ, ಗುರುಸ್ವಾಮಿ, ಜಯಮ್ಮ, ತುಳಸಿ, ಸುಭಾಷಿಣಿ, ಅರ್ಚಕ ಪಿ.ಆರ್.ನಿಂಗಣ್ಣ, ರುದ್ರಣ್ಣ, ಪಿಡಿಒ ಹನುಮಂತರಾಜು, ಕಂದಾಯಾಧಿಕಾರಿ ತಿಪ್ಪೇಸ್ವಾಮಿ, ಗ್ರಾಮ ಲೆಕ್ಕಾಧಿಕಾರಿ ನರೇಂದ್ರಬಾಬು ಮುಂತಾದವರು ಉಪಸ್ಥಿತರಿದ್ದರು.

## ವಿಶ್ವ ಸಂಸ್ಕೃತ ದಿನೋತ್ಸವದ ಅಂಗವಾಗಿ ನಗರದಲ್ಲಿ ಜಾಥಾ



» ಚಿತ್ರದುರ್ಗ

ಚಿತ್ರದುರ್ಗ ನಗರದ ಶ್ರೀ ಕಬೀರಾನಂದ ಸ್ವಾಮಿ ವಿದ್ಯಾ ಸಂಸ್ಥೆಯ ಅಡಿಯಲ್ಲಿ ನಡೆಯುತ್ತಿರುವ ಕಭೀರಾನಂದ ಸಂಸ್ಕೃತಿ ಪಾಠಶಾಲೆಯವತಿಯಿಂದ ವಿಶ್ವ ಸಂಸ್ಕೃತ ದಿನೋತ್ಸವದ ಅಂಗವಾಗಿ ನಗರದಲ್ಲಿ ಜಾಥಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.ಶ್ರಾವಣ ಮಾಸದ ಹುಣ್ಣಿಮೆಯಂದು ನಾಡಿನೆಲ್ಲಡೆ ವಿಶ್ವ ಸಂಸ್ಕೃತ ದಿನೋತ್ಸವವನ್ನು ಆಚರಣೆ ಮಾಡಲಾಗುತ್ತದೆ, ಸಂಸ್ಕೃತ ನಮ್ಮ ಪುರಾತನವಾದ ಭಾಷೆಯಾಗಿದೆ. ಇದರ ಬಳಕೆ ಇತ್ತಿಚೀನ ದಿನಮಾನದಲ್ಲಿ ಕಡಿಮೆಯಾಗುತ್ತಿದೆ ಇದನ್ನು ಎಲ್ಲರು ಸಹಾ ಕಲಿಯಬೇಕಿದೆ. ಇದನ್ನು ಕಲಿಯುವುದರಿಂದ ನಮ್ಮ ಇತಿಹಾಸವನ್ನು ತಿಳಿದಂತೆ ಆಗುತ್ತದೆ.

ನಗರದ ಕರುವಿನಕಟ್ಟೆ ಬಳಿಯಲ್ಲಿನ ಕಭೀರಾನಂದ ಸಂಸ್ಕೃತಿ ಪಾಠಶಾಲೆಯವತಿಯಿಂದ ಹಮ್ಮಿಕೊಂಡಿದ್ದ ಜಾಥಾದಲ್ಲಿ ಭಾಗವಹಿಸಿದ್ದ ವಿದ್ಯಾರ್ಥಿಗಳು ಸಂಸ್ಕೃತವನ್ನು ಕಲಿಯಿರಿ ಸೇರಿದಂತೆ ಇತರೆ ಭಿತ್ತಿ ಪತ್ರಗಳನ್ನು ಹಿಡಿದು ಜಾಥಾದಲ್ಲಿ ಭಾಗವಹಿಸಿದ್ದರು. ಜಾಥಾ ನಗರದ ಕಬೀರಾನಂದಾಶ್ರಮದ ಬಳಿಯಿಂದ ಪ್ರಾರಂಭವಾಗಿ ಫಿಲ್ಟರ್ ಹೌಸ್, ಏಕನಾಥೇಶ್ವರಿ ಪಾದಗುಡಿ, ಉಚ್ಚಂಗಿ ಯಲ್ಲಮ್ಮ ದೇವಾಲಯ ದೊಡ್ಡಪೇಟೆ, ರಂಗಯ್ಯನ ಬಾಗಿಲು ಉಜ್ಜನಿ ಮಠ, ಕರುವಿನ ಕಟ್ಟೆ ವೃತ್ತವನ್ನು ಹಾದು ಮರಳಿ ಕಬೀರಾನಂದಾಶ್ರಮವನ್ನು ಸೇರಿದೆ.ಈ ಕಾರ್ಯಕ್ರಮದಲ್ಲಿ ಸಂಸ್ಕೃತ ಶಾಲೆಯ ಮಖ್ಯೋಪಾಧ್ಯಾಯರಾದ ಗಣಪತಿ ಶಾಸ್ತ್ರಿ, ಸಹ ಶಿಕ್ಷಕರಾದ ಪಿ.ಕೆ.ಸುಮನ, ಆರ್.ಹೇಮಾವತಿ, ಸುಬ್ರಾರಾಯ್ ಭಟ್, ಮಂಜುನಾಥ್ ಭಾಗವಹಿಸಿದ್ದರು.

## ಹೊಸದುರ್ಗ ತಾ.ನಾಯಕ ನೌಕರರ ಸಂಘದ ಅಧ್ಯಕ್ಷರಾಗಿ ಜಯಪ್ರಕಾಶ್ ಆಯ್ಕೆ

» ಹೊಸದುರ್ಗ



ಪಟ್ಟಣದ ಮದಕರಿ ವೃತ್ತದ ಸಮೀಪವಿರುವ ವಾಲ್ಮೀಕಿ ನಾಯಕ ಸಮುದಾಯದ ಕಚೇರಿಯಲ್ಲಿ ತಾಲೂಕು ವಾಲ್ಮೀಕಿ ನಾಯಕ ನೌಕರರ ಸಂಘಕ್ಕೆ ಮಂಗಳವಾರ ನೂತನ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಯಿತು. ಇದೇ ಸಂದರ್ಭದಲ್ಲಿ ನೂತನ ಅಧ್ಯಕ್ಷರಾಗಿ ಜಯಪ್ರಕಾಶ್, ಉಪಾಧ್ಯಕ್ಷರಾಗಿ ಪರಮ್ಮ, ಪ್ರಧಾನ ಕಾರ್ಯದರ್ಶಿಯಾಗಿ ಮೈಲಾರಪ್ಪ, ಸಹ ಕಾರ್ಯದರ್ಶಿಯಾಗಿ ಜಯರಾಮಪ್ಪ, ಖಜಾಂಚಿ ರಾಜಪ್ಪ ಇವರುಗಳನ್ನು ಆಯ್ಕೆ ಮಾಡಲಾಯಿತು.ಅಧ್ಯಕ್ಷರಾಗಿ ಆಯ್ಕೆಯಾದ ಬಳಿಕ ಜಯಪ್ರಕಾಶ್ ಮಾತನಾಡಿ, ರಾಜ್ಯದಲ್ಲಿ ಎಲ್ಲಾ ಸಮುದಾಯಗಳಲ್ಲಿನ ನೌಕರರು ತಮ್ಮ ಸಮುದಾಯದ ಆದರ್ಶ ಪುರುಷರ ಹೆಸರಿನಲ್ಲಿ ನೌಕರರ ಸಂಘಗಳನ್ನು ರಚನೆ ಮಾಡಿಕೊಂಡಿದ್ದಾರೆ. ಅದರಂತೆಯೇ, ವಾಲ್ಮೀಕಿ ನಾಯಕ ಜನಾಂಗದ ಶ್ರೇಯೋಭಿವೃದ್ಧಿಗಾಗಿ, ಸಮುದಾಯದ ಮಕ್ಕಳನ್ನು ಪ್ರೋತ್ಸಾಹಿಸಲು, ಸಮುದಾಯದ ನೌಕರರಲ್ಲಿ ಸಮಸ್ಯೆಗಳು ತಲೆದೂರಿದಾಗ ಪರಿಹಾರ ಕಂಡುಕೊಳ್ಳಲು ವಾಲ್ಮೀಕಿ ನಾಯಕ ನೌಕರರ ಸಂಘ ಹುಟ್ಟಿಕೊಂಡಿದೆ. ಹಲವಾರು ವರ್ಷಗಳಿಂದಲೂ ಕೂಡ ಸಕ್ರಿಯವಾಗಿ ಕೆಲಸ ಮಾಡುತ್ತಿದೆ. ಇಂತಹ ಸಂಘಕ್ಕೆ ತಾಲೂಕು ಅಧ್ಯಕ್ಷನನ್ನಾಗಿ ನನ್ನನ್ನು ಆಯ್ಕೆ ಮಾಡಿರುವುದು ಬಹಳ ಸಂತಸ ತಂದಿದೆ. ಸಂಘದ ಆಶಯದಂತೆ ಕೆಲಸ ಮಾಡುತ್ತೇನೆ ಎಂದು ಹೇಳಿದರು.

ಈ ವೇಳೆ ನೂತನ ಉಪಾಧ್ಯಕ್ಷೆ ಪರಮ್ಮ, ಪ್ರಧಾನ ಕಾರ್ಯದರ್ಶಿ ಮೈಲಾರಪ್ಪ, ಸಂಘದ ಸದಸ್ಯರಾದ ರಂಗಪ್ಪ, ದೊಡ್ಡಯ್ಯ, ತಿಮ್ಮಪ್ಪ, ಆಂಜನೇಯ ಇತರರಿದ್ದರು.

## ಪ್ರತಾಪ್ ಸಿಂಹ ಗೆಲ್ಲಿಸಬೇಡಿ: ಸಿದ್ದರಾಮಯ್ಯ ವಿಡಿಯೋ ವೈರಲ್

ಈ ಬಾರಿ ಸಂಸದ ಪ್ರತಾಪ್ ಸಿಂಹನನ್ನು ದಯವಿಟ್ಟು ಗೆಲ್ಲಿಸಬೇಡಿ ಎಂದು ಕೈ ಮುಗಿದು ಮನವಿ ಮಾಡಿದ ಸಿದ್ದರಾಮಯ್ಯ ವಿಡಿಯೋ ವೈರಲ್ ಆಗಿದೆ. ನರೇಂದ್ರ ಮೋದಿ ಪ್ರಧಾನಿಯಾಗಿ ಒಂಬತ್ತು ವರ್ಷ ಆಯಿತು. ಇಷ್ಟು ವರ್ಷದಲ್ಲಿ ಅವರು ಬರಿ ಸುಳ್ಳನ್ನೇ ಹೇಳುತ್ತಾ ಬಂದಿದ್ದಾರೆ. ಹಿಂದು ಮುಸ್ಲಿಂ, ಹಿಜಾಬ್, ಹಲಾಲ್ ಕಟ್ ವಿಚಾರಗಳನ್ನು ಮುಂದಿಟ್ಟು ಸಮಾಜದ ಸಾಮರಸ್ಯವನ್ನೇ ಹಾಳು ಮಾಡುವ ಕೆಲಸ ಮಾಡಿದ್ದಾರೆ. ಈ ಬಾರಿ ದಯಮಾಡಿ ಮೈಸೂರಿನ ಜನ ಪ್ರತಾಪ್ ಸಿಂಹನನ್ನು ಆಯ್ಕೆ ಮಾಡಬೇಡಿ. ಇವರೆಲ್ಲ ಸಮಾಜ ವಿರೋಧಿ ಶಕ್ತಿಗಳು ಎಂದು ಸಿದ್ದರಾಮಯ್ಯ ಹೇಳಿರುವ ವಿಡಿಯೋ ವೈರಲ್ ಆಗಿದೆ.

**ಪ್ರಮುಖ ಸುದ್ದಿ**

### ವಿವಿಧ ಕ್ರೀಡೆಗಳಲ್ಲಿ ಸಾಧನೆಗೈದ ಕಾಲೇಜಿನ ಕ್ರೀಡಾಪಟುಗಳಿಗೆ ಸನ್ಮಾನ

# ಯುವಜನತೆಯ ಮನೋವಿಕಾಸಕ್ಕೆ ಕ್ರೀಡೆ ಸಹಕಾರಿ

» ಚಳ್ಳಕೆರೆ



ಯುವಜನತೆಯ ದೈಹಿಕ ಮತ್ತು ಮಾನಸಿಕ ವಿಕಾಸಕ್ಕೆ ಕ್ರೀಡೆಗಳು ಸಹಕಾರಿಯಾಗಲಿದೆ ಎಂದು ಪ್ರಾಚಾರ್ಯ ಡಾ.ಆರ್.ರಂಗಪ್ಪ ಹೇಳಿದರು.

ನಗರದ ಎಚ್.ಪಿ.ಪಿ.ಸಿ ಸರ್ಕಾರಿ ಪ್ರಥಮದರ್ಜೆ ಕಾಲೇಜಿನ ಆವರಣದಲ್ಲಿ ದೈಹಿಕಶಿಕ್ಷಣವಿಭಾಗದಿಂದಹಮ್ಮಿಕೊಂಡಿದ್ದ ರಾಷ್ಟ್ರೀಯ ಕ್ರೀಡಾ ದಿನದ ಪ್ರಯುಕ್ತ ವಿವಿಧ ಕ್ರೀಡೆಗಳಲ್ಲಿ ಸಾಧನೆಗೈದ ಕಾಲೇಜಿನ ವಿದ್ಯಾರ್ಥಿಗಳನ್ನು ಸನ್ಮಾನಿಸಿ ಅವರು ಮಾತನಾಡಿದರು.

ಹಾಕಿಮಾಂತ್ರಿಕ ಮೇಜರ್ ಧ್ಯಾನ್‌ಚಂದ್ ಅವರ ಸ್ಮರಣಾರ್ಥವಾಗಿ ಅವರ ಜನ್ಮದಿನವನ್ನು ರಾಷ್ಟ್ರೀಯ ಕ್ರೀಡಾದಿನವನ್ನಾಗಿ ಆಚರಿಸಲಾಗುತ್ತದೆ. ಅವರು ಹಾಕಿ ಕ್ರೀಡೆಗೆ ಸಲ್ಲಿಸಿದ ಜೀವಮಾನ ಸಾಧನೆಯು ಮತ್ತ್ಯಾವ ಕ್ರೀಡಾಪಟುವು ಸಹ ಸಾಧಿಸಲು ಸಾಧ್ಯವಾಗಿಲ್ಲ. ಅಂತಹ ಸಾಧನೆಯನ್ನು ನಮ್ಮ ಕಾಲೇಜಿನ ಎಲ್ಲ ಕ್ರೀಡಾಪಟುಗಳು ಸಾಧಿಸಬೇಕು. ಅದಕ್ಕಾಗಿ ಕಾಲೇಜಿನಲ್ಲಿ ದೈಹಿಕ ಶಿಕ್ಷಣ ವಿಭಾಗವಿದೆ. ಸುಜ್ಜಿತವಾದ ಕ್ರೀಡಾಸಲಕರಣೆಗಳು, ವಿಶಾಲವಾದ ಆವರಣ, ಆಟದ ಮೈದಾನವಿದೆ. ಹಾಗೇ ಕಾಲೇಜಿನಲ್ಲಿ ಎನ್‌ಸಿಸಿ ವಿಭಾಗವಿದ್ದು, ಅದರಲ್ಲೂ ಸಹ ಸಾಕಷ್ಟು ವಿದ್ಯಾರ್ಥಿಗಳು ಪಾಲ್ಗೊಳ್ಳಬೇಕು. ಇದರಿಂದ ವಿದ್ಯಾರ್ಥಿಗಳ ದೈಹಿಕವಾಗಿ ಮಾನಸಿಕವಾಗಿ ಮತ್ತು ವ್ಯಕ್ತಿತ್ವದ ಪರಿಪೂರ್ಣತೆಯನ್ನು ಗಳಿಸಲು ಸಾಧ್ಯವಾಗುತ್ತದೆ. ಇದರಿಂದ ಶೈಕ್ಷಣಿಕ ಚಟುವಟಕೆಗಳಿಗೆ ಉತ್ತೇಜನಕ್ಕೆ ದೊರೆಯುತ್ತದೆ. ಹಾಗಾಗಿ ಎಲ್ಲರೂ ಕ್ರೀಡೆಯಲ್ಲಿ ಭಾಗವಹಿಸಬೇಕು ಎಂದು ಸಲಹೆ ನೀಡಿದರು.ದೈಹಿಕಶಿಕ್ಷಣ ನಿರ್ದೇಶಕ ಎಚ್.ತಿಪ್ಪೇಸ್ವಾಮಿ, "ಮೇಜರ್ ಧ್ಯಾನ್‌ಚಂದ್ ಅವರು ದೇಶಕಂಡ ಅಪ್ರತಿಮ ಹಾಕಿ ಕ್ರೀಡಾಪಟುವಾಗಿದ್ದಾರೆ. ಜತೆಗೆ ರಾಷ್ಟ್ರಪ್ರೇಮವನ್ನು ಬೆಳೆಸಿದ ಅಪ್ಪಟ ದೇಶಭಕ್ತರಾಗಿದ್ದಾರೆ. ಕ್ರೀಡಾಪಟುವಾಗಿ ಮೂರು ಒಲಂಪಿಕ್ಸ್‌ನಲ್ಲಿ ಭಾಗವಹಿಸಿ ಬಂಗಾರ ಪದಕಗಳಿಸಿದರು. ಇವರು ಸುಮಾರು 185 ಪಂಧ್ಯಗಳಿಂದ 570 ಗೋಲ್‌ಗಳನ್ನು ಹೊಡೆಯುವ ಮೂಲಕ ವಿಶ್ವದ ಪ್ರಥಮ ಹಾಕಿ ಕ್ರೀಡಾಪಟುವಾಗಿದ್ದಾರೆ. ಇಂತರಹ ಮಹಾನ್ ವ್ಯಕ್ತಿಯನ್ನು ಸ್ಮರತಿಸುವ ಮೂಲಕ ಅವರ ಕ್ರೀಡಾ ಸಾಧನೆಯನ್ನು ಕ್ರೀಡಾಪಟುಗಳು ಅಳವಡಿಸಿಕೊಳ್ಳಬೇಕು" ಎಂದರು.

ಇದೇವೇಳೆ ವಿವಿಧ ಕ್ರೀಡೆಗಳಲ್ಲಿ ರಾಜ್ಯ ಮತ್ತು ರಾಷ್ಟ್ರೀಯ ಮಟ್ಟದಲ್ಲಿ ಭಾಗವಹಿಸಿ ಸಾಧನಗೈದ ಕಾಲೇಜಿನ ಕ್ರೀಡಾಪಟುಗಳನ್ನು ಸನ್ಮಾನಿಸಲಾಯಿತು. ಪ್ರಾಧ್ಯಾಪಕರಾದ ಬಿ.ಯು. ನರಸಿಂಹಮೂರ್ತಿ, ರಂಗಸ್ವಾಮಿ, ಬಣಕಾರ್, ರಘುನಾಥ್, ಮಹಮ್ಮದ "ಸತ್ತಾರ್, ಕೆ.ಚಿತ್ತಯ್ಯ, ಜಗನ್ನಾಥ್, ಸತೀಶ್, ಮುರುಳಿ, ಗ್ರಂಥಪಾಲಕ ಪಾಪಣ್ಣ, ಅಧಿಕ್ಷಕ ವಿ.ವಿನೇಶ್ ಇದ್ದರು.

## ಫಾಸ್ಟ್ ನ್ಯೂಸ್

### ಅರಬ್ಬೀ ಸಮುದ್ರದಲ್ಲಿ ದೋಣಿ ಪಲ್ಟಿ, ಓರ್ವ ಮೀನುಗಾರ ಸಾವು

ಉತ್ತರಕನ್ನಡಜಿಲ್ಲೆಯಹೊನ್ನಾವರದಕಾಸರಕೋಡು ಬಂದರು ಸಮೀಪ ಅರಬ್ಬೀ ಸಮುದ್ರದಲ್ಲಿ ದೋಣಿ ಪಲ್ಟಿಯಾಗಿ ಓರ್ವ ಮೀನುಗಾರ ಸಾವನ್ನಪ್ಪಿದ್ದಾನೆ. ಪ್ರಜ್ವಲ್ ಮಾಬ್ಲ ಖಾರ್ವಿ(19) ಮೃತಪಟ್ಟಿದ್ದು, ರಾಜು ಶೇಷಗಿರಿ ಎಂಬ ಮೀನುಗಾರನನ್ನು ರಕ್ಷಿಸಲಾಗಿದೆ. ಹೊನ್ನಾವರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ..

### ಖಾತೆಗೆ ಹಣ ಬೀಳುತ್ತಿದ್ದಂತೆ ಮಹಿಳೆ ಫುಲ್ ಖುಷ್

ಗೃಹಲಕ್ಷ್ಮೀ ಯೋಜನೆಗೆ ಚಾಲನೆ ವೇಳೆ ಮಹಿಳೆ ನೃತ್ಯ ಮಾಡಿ ಖುಷಿಪಟ್ಟಿದ್ದಾರೆ. ಚಿತ್ರದುರ್ಗ ಜಿಲ್ಲೆ ಹಿರಿಯೂರು ತಾಲೂಕಿನ ರಂಗೇನಹಳ್ಳಿಯಲ್ಲಿ ಫಲಾನುಭವಿ ಮಹಿಳೆ ಸಿಎಂ ಸಿದ್ಧರಾಮಯ್ಯ ಹೆಸರಲಿ ಹಾಡು ಹೇಳುತ್ತ ನೃತ್ಯ ಮಾಡಿದ್ದು ವಿಡಿಯೋ ವೈರಲ್ ಆಗಿದೆ.

### ಚಾಮರಾಜನಗರ ಜಿಲ್ಲೆಯಲ್ಲೂ ಜೋರಾಯ್ತು ಕಾವೇರಿ ಕಿಚ್ಚು

ತಮಿಳುನಾಡಿಗೆ ನೀರು ಹರಿಸುವುದನ್ನು ಖಂಡಿಸಿ ಚಾಮರಾಜನಗರ ಜಿಲ್ಲೆಯಲ್ಲೂ ಪ್ರತಿಭಟನೆ ನಡೆಸಲಾಗುತ್ತಿದೆ. ಮಂಡ್ಯದಲ್ಲಿ ರೈತರು ಪ್ರತಿಭಟನೆ ನಡೆಸುತ್ತಿದ್ದು ಚಾಮರಾಜನಗರದಲ್ಲೂ ಆಕ್ರೋಶ ವ್ಯಕ್ತವಾಗಿದೆ. ತಮಿಳುನಾಡಿಗೆ ನಿತ್ಯ 5,000 ಕ್ಯೂಸೆಕ್ ನೀರು ಬಿಡಲು ಸೂಚನೆ ಹಿನ್ನೆಲೆ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ ವಿರುದ್ಧ ರೈತರು ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಚಾಮರಾಜನಗರದ ಭುವನೇಶ್ವರಿ ವೃತ್ತದ ಬಳಿ ರಸ್ತೆ ತಡೆದು ಪ್ರತಿಭಟನೆ ನಡೆಸುತ್ತಿದ್ದಾರೆ.

### ಕುಮಾರಸ್ವಾಮಿ ಶೀಘ್ರ ಗುಣಮುಖವಾಗಲಿ ಎಂದು ವಿಶೇಷ ಪೂಜೆ

ರಾಮನಗರ ಜಿಲ್ಲೆ ಚನ್ನಪಟ್ಟಣ ತಾಲೂಕಿನ ಎಆಖ ಮುಖಂಡರು ಹೆಚ್‌ಡಿ ಕುಮಾರಸ್ವಾಮಿ ಶೀಘ್ರ ಗುಣಮುಖವಾಗಲಿ ಎಂದು ಕಾರ್ಯಕರ್ತರು ವಿಶೇಷ ಪೂಜೆ ಸಲ್ಲಿಸಿದ್ದಾರೆ. ರಾಮನಗರದ ಕೆಂಗಲ್ ಆಂಜನೇಯಸ್ವಾಮಿ ದೇವಾಲಯ, ಚಾಮುಂಡೇಶ್ವರಿ ದೇವಸ್ಥಾನದಲ್ಲಿ ವಿಶೇಷ ಪೂಜೆ ಸಲ್ಲಿಸಿ 101 ಈಡುಗಾಯಿ ಒಡೆದಿದ್ದಾರೆ.

### ಮಂಡ್ಯದಲ್ಲಿ ಕಾವೇರಿದ ಕಾವೇರಿ ಹೋರಾಟ

ಮಂಡ್ಯ ಜಿಲ್ಲೆಯಲ್ಲಿ ದಿನೇ ದಿನೇ ಕಾವೇರಿ ಹೋರಾಟ ಕಾವೇರುತ್ತಿದೆ. ತಮಿಳುನಾಡಿಗೆ ನಿತ್ಯ 5,000 ಕ್ಯೂಸೆಕ್ ನೀರು ಬಿಡಲು ಸೂಚನೆ ಹಿನ್ನೆಲೆ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರ ವಿರುದ್ಧ ಮಂಡ್ಯ ರೈತರು ಆಕ್ರೋಶ ಹೊರ ಹಾಕಿದ್ದಾರೆ. ಏಖಖ ನಿಂದ ತಮಿಳುನಾಡಿಗೆ ನೀರು ಹರಿಸುವುದನ್ನು ಖಂಡಿಸಿ ಮಂಡ್ಯದ ವಿಶ್ವೇಶ್ವರಯ್ಯ ಪ್ರತಿಮೆ ಬಳಿ ಪ್ರತಿಭಟನೆ ನಡೆಸುತ್ತಿದ್ದಾರೆ. ಪ್ರತಿಭಟನೆಯಲ್ಲಿ ಕಾಂಗ್ರೆಸ್, ಜೆಡಿಎಸ್, ಬಿಜೆಪಿ ಕಾರ್ಯಕರ್ತರು ಭಾಗಿಯಾಗಿದ್ದಾರೆ.

### ಚಿಕ್ಕೋಬನಹಳ್ಳಿ ಗ್ರಾಮದಲ್ಲಿ ಹಾಡುಹಗಲೆ ವೃದ್ದೆಯ ಮಾಂಗಲ್ಯ ಸರ ಕದ್ದು ಪರಾರಿಯಾದ ಕಳ್ಳರು

» ಮೊಳಕಾಲ್ಮುರು

ಹಾಡುಹಗಲೆ ವೃದ್ಧೆಯ ಮಾಂಗಲ್ಯ ಸರ ಕದ್ದು ಪರಾರಿಯಾದ ಕಳ್ಳರು ಘಟನೆಯ ಸ್ಥಳಕ್ಕೆ ದೌಡಾಯಿಸಿದ ಪೊಲೀಸ್ ಸಿಬ್ಬಂದಿ ತನಿಖೆ ಚುರುಕು ಗೊಳಿಸಿದ ಪೊಲೀಸ್ ಅಧಿಕಾರಿಗಳು

ಮೊಳಕಾಲ್ಮುರು ತಾಲೂಕಿನ ಚಿಕ್ಕೋಬನಹಳ್ಳಿ ಗ್ರಾಮದಲ್ಲಿ ಗುರುವಾರ ಬೆಳಿಗ್ಗೆ 10 ಗಂಟೆ ಸಮಯದಲ್ಲಿ ಜಯಮ್ಮ ಎಂಬ 66 ವರ್ಷದ ವೃದ್ದೆ ಪಕ್ಕದ ತುಮಕೂರ್ಲಹಳ್ಳಿ ಗ್ರಾಮದ ಬ್ಯಾಂಕ್ ಗೆ ಹೋಗಲು ಮನೆಯಿಂದ ಹೊರಟು ಊರಿನ ಮುಖ್ಯ ಬೀದಿಯಲ್ಲಿ ಬಸ್ ನಿಲ್ದಾಣದ ಕಡೆಗೆ ನಡೆದು ಕೊಂಡು ಹೋಗುವಾಗ, ಹೋಗುವ ದಾರಿ ಮಧ್ಯದಲ್ಲಿ ಬೈಕ್ ನಲ್ಲಿ ಬಂದ ಕಳ್ಳರು,' ನಾವು ಪೋಲಿಸರು ಮುಂದೆ ಕಳ್ಳರಿದ್ದಾರೆ ಅದರಿಂದ ನಿಮ್ಮ ಮಾಂಗಲ್ಯ ಸರ ಬಿಚ್ಚಿ ಬ್ಯಾಗಿಗೆ ಹಾಕ್ಕಿಕೊಳ್ಳಿ ಎಂದು ವೃದ್ದೆ ಜಯಮ್ಮಗೆ ಹೇಳಿದ್ದಾರೆ', ಅದನ್ನು ನಂಬಿದ ವೃದ್ದೆ ಜಯಮ್ಮ ಬ್ಯಾಗಿಗೆ ಮಾಂಗಲ್ಯ ಸರ ಹಾಕಿಕೊಳ್ಳುವಾಗ ಕಳ್ಳರು ಮಾಂಗಲ್ಯ ಸರ ಕಿತ್ತು ಕೊಂಡು ಪರಾರಿಯಾಗಿದ್ದು ಜಯಮ್ಮ ಕೂಗಾಡಿಕೊಂಡಾಗ ಸ್ಥಳೀಯ ಜನರು ಬರುವಷ್ಟರಲ್ಲಿ ಕಳ್ಳರು ಪರಾರಿಯಾಗಿದ್ದರು ಘಟನೆಯ ಸಮ್ಮಂದ ಮೊಳಕಾಲ್ಮುರು ಪೊಲೀಸ್ ಠಾಣೆಗೆ ದೂರು ದಾಖಲಾದ ಕೂಡಲೆ ಪೊಲೀಸರು ಘಟನಾ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದರು ಘಟನಾ ಸ್ಥಳಕ್ಕೆ ಡಿಎಸ್ ಪಿ ರಾಜಣ್ಣ, ಸಿಪಿಐ ವಸಂತ ವಿ. ಹಸೋಡಿ. ಮತ್ತು ಪಿಎಸ್ ಐ ಪಾಂಡುರಂಗ ಹಾಗೂ ಪೊಲೀಸ್ ಸಿಬ್ಬಂದಿ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಮೊಳಕಾಲ್ಮುರು ತಾಲ್ಲೂಕಿನ ಚಿಕ್ಕೋಬನಹಳ್ಳಿ ಗ್ರಾಮದಲ್ಲಿ ಕಳವು ಪ್ರಕರಣ ಪೊಲೀಸ್ ಅಧಿಕಾರಿಗಳು ಭೇಟಿ ನೀಡಿ ಪರಿಶೀಲಿಸಿದರು

### ಜಿಲ್ಲಾ ಮಟ್ಟದ ಏಕಗವಾಕ್ಷಿ ಸಮಿತಿ ಸಭೆ

# ಅಕ್ಷಯ ಫುಡ್ ಪಾರ್ಕ್‌ನಲ್ಲಿ ಉದ್ದಿಮೆ ಪ್ರಾರಂಭಿಸಲು ಇರುವ ತೊಡಕು ನಿವಾರಣೆಗೆ ಕ್ರಮ: ಜಿಲ್ಲಾಧಿಕಾರಿ

» ಚಿತ್ರದುರ್ಗ

ಜಿಲ್ಲೆಯ ಹಿರಿಯೂರು ತಾಲ್ಲೂಕು ಹುಚ್ಚವ್ವನಹಳ್ಳಿಗ್ರಾಮದಲ್ಲಿಸ್ಥಾಪಿತವಾಗಿರುವ ಅಕ್ಷಯ ಫುಡ್ ಪಾರ್ಕ್‌ನಲ್ಲಿ ಸಬ್ ಲೀಸ್ ಪಡೆದು, ಕಾರಣಾಂತರದಿಂದ ಇದುವರೆಗೂ ಉದ್ದಿಮೆ ಪ್ರಾರಂಭ ಮಾಡದಿರುವ ಉದ್ದಿಮೆದಾರರಿಗೆ, ಲೀಸ್ ಅವಧಿಯನ್ನು 10 ವರ್ಷಗಳಿಗೆ ವಿಸ್ತರಿಸಿ, ಕೆಐಎಡಿಬಿ ನಿಯಮಗಳಲ್ಲಿ ತಿದ್ದುಪಡಿ ಮಾಡಿ ಕೊಡುವಂತೆ ಕೋರುವ ಪ್ರಸ್ತಾವನೆ ಸಲ್ಲಿಸುವಂತೆ ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ. ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸೋಮವಾರ ಏರ್ಪಡಿಸಲಾದ ಜಿಲ್ಲಾ ಮಟ್ಟದ ಏಕಗವಾಕ್ಷಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪಿಪಿಪಿ ಮಾದರಿಯಡಿ ನಿರ್ಮಾಣಗೊಂಡಿರುವ ಅಕ್ಷಯ ಫುಡ್ ಪಾರ್ಕ್‌ನಲ್ಲಿ ಒಟ್ಟು 96 ನಿವೇಶನಗಳನ್ನು ಮಾಡಲಾಗಿದ್ದು, ಇದರಲ್ಲಿ ಈಗಾಗಲೆ 89 ನಿವೇಶನಗಳನ್ನು ಹಂಚಿಕೆ ಮಾಡಲಾಗಿದೆ, ಇನ್ನೂ 06 ನಿವೇಶನಗಳ ಹಂಚಿಕೆ ಬಾಕಿ ಇದೆ. ಈ ಪೈಕಿ ಈಗಾಗಲೆ 14 ಉದ್ಯಮಗಳು ಪ್ರಾರಂಭಗೊಂಡಿವೆ. ಹಂಚಿಕೆ ಆಗಿರುವ ನಿವೇಶನಗಳಲ್ಲಿ ಕೆಲವು ಉದ್ದಿಮೆದಾರರು, ಸಾಲ, ಬಂಡವಾಳ ಹೂಡಿಕೆ ಮತ್ತಿತರ ಕಾರಣಗಳಿಂದಾಗಿ ಇನ್ನೂ ಉದ್ಯಮ ಪ್ರಾರಂಭವಾಗಿಲ್ಲ. ಅಕ್ಷಯ ಫುಡ್ ಪಾರ್ಕ್ ಅಧಿಕಾರಿಗಳಿಗೆ ನೀಡಲಾಗಿದ್ದ ಲೀಸ್ ಅವಧಿಯನ್ನು ಸರ್ಕಾರ ಈಗಾಗಲೆ 10 ವರ್ಷಗಳಿಗೆ ವಿಸ್ತರಿಸಿದೆ. ಆದರೆ ಉದ್ದಿಮೆದಾರರಿಗೆ ನಿಯಮಾನುಸಾರ 03 ವರ್ಷಗಳ ಅವಧಿಗೆ ಸಬ್ ಲೀಸ್ ನೀಡಿರುವ ಅಕ್ಷಯ ಫುಡ್ ಪಾರ್ಕ್‌ನವರು, ಇದುವರೆಗೂ ಉದ್ದಿಮೆ ಪ್ರಾರಂಭಿಸದ ಉದ್ದಿಮೆದಾರರಿಗೆ ಸಬ್ ಲೀಸ್ ಅವಧಿಯನ್ನು ವಿಸ್ತರಿಸುತ್ತಿಲ್ಲ, ಸಾಲ ಪಡೆಯಲು ಎನ್‌ಓಸಿ ಯನ್ನು ಕೂಡ ನೀಡುತ್ತಿಲ್ಲ, ಇದರಿಂದಾಗಿ ಲಕ್ಷಾಂತರ ಹಣ ನೀಡಿ ಸಬ್ ಲೀಸ್ ಪಡೆದಿರುವ ಉದ್ದಿಮೆದಾರರಿಗೆ ತೀವ್ರ ತೊಂದರೆಯಾಗುತ್ತಿದೆ ಎಂದು ಕೈಗಾರಿಕೆ ಇಲಾಖೆ ಜಂಟಿನಿರ್ದೇಶಕ ಬಿ. ಆನಂದ್ ಅವರು ಸಭೆಯ ಗಮನಕ್ಕೆ ತಂದರು. ಇದಕ್ಕೆ ಪ್ರತಿಕ್ರಿಯಿಸಿದ ಕೆಐಎಡಿಬಿ ಅಧಿಕಾರಿ ಲಕ್ಷ್ಮೀಶ ಅವರು, ಈಗಾಗಲೆ ಲೀಸ್ ಅವಧಿಯನ್ನು 10 ವರ್ಷಗಳಿಗೆ ವಿಸ್ತರಿಸಿ, ಸರ್ಕಾರದ ಕಾರ್ಯದರ್ಶಿಗಳು ಸುತ್ತೋಲೆ ಹೊರಡಿಸಿದ್ದಾರೆ, ಆದರೆ ಅಕ್ಷಯ ಫುಡ್ ಪಾರ್ಕ್‌ನವರು ಸ್ಪಂದಿಸುತ್ತಿಲ್ಲ ಎಂದರು. ಅಕ್ಷಯ ಫುಡ್ ಪಾರ್ಕ್‌ನ ವ್ಯವಸ್ಥಾಪಕ ನಿರ್ದೇಶಕ ನಾರಾಯಣಸ್ವಾಮಿ ಅವರು ಉತ್ತರಿಸಿ, ಕೆಐಎಡಿಬಿ ನಿಯಮಗಳನ್ವಯ 03 ವರ್ಷದೊಳಗೆ ಉದ್ಯಮ ಪ್ರಾರಂಭಿಸದ ಉದ್ದಿಮೆದಾರರಿಗೆ ಸಬ್ ಲೀಸ್ ಅನ್ನು ಹೆಚ್ಚುವರಿಯಾಗಿ 01 ವರ್ಷ ಮಾತ್ರ ನೀಡಲು ಅವಕಾಶವಿದೆ. ಈ ಬಗ್ಗೆ ಕೆಐಎಡಿಬಿ ಯಿಂದ ಸ್ಪಷ್ಟ ಆದೇಶ ಬಂದಲ್ಲಿ, ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದರು. ಜಿಲ್ಲಾಧಿಕಾರಿ ದಿವ್ಯಪ್ರಭು ಅವರು ಮಾತನಾಡಿ, ಜಿಲ್ಲೆಯಲ್ಲಿ ಸಾಕಷ್ಟು ಉದ್ಯಮಗಳು ಪ್ರಾರಂಭವಾಗಬೇಕು, ಬಂಡವಾಳ ಹರಿದುಬರಬೇಕು, ಹೆಚ್ಚು ಹೆಚ್ಚು ಉದ್ಯೋಗಗಳು ಸೃಷ್ಟಿಯಾಗಬೇಕು ಎನ್ನುವುದು ಸರ್ಕಾರದ ಆಶಯವಾಗಿದ್ದು, ಇದಕ್ಕಾಗಿ ಅನೇಕ ಯೋಜನೆಗಳನ್ನು ಜಾರಿಗೊಳಿಸಿದೆ, ಕೈಗಾರಿಕಾ ನೀತಿ ಕೂಡ ಜಾರಿಯಲ್ಲಿದೆ. ಆದರೆ ಅಕ್ಷಯ ಫುಡ್ ಪಾರ್ಕ್‌ನವರು, ಒಡಂಬಡಿಕೆಗೆ ಅನುಗುಣವಾಗಿ ನಡೆದುಕೊಳ್ಳದಿರುವುದು ಮೇಲ್ನೋಟಕ್ಕೆ ಕಂಡುಬರುತ್ತಿದೆ. ಮೂಲಭೂತ ಸೌಕರ್ಯ ಒದಗಿಸದಿರುವುದು ಕೂಡ ಷರತ್ತುಗಳ ಉಲ್ಲಂಘನೆಯಾಗುತ್ತದೆ. ನೀವು ಮಾತ್ರ 1 ವರ್ಷಗಳಿಗೆ ಲೀಸ್ ಅವಧಿಯನ್ನು ವಿಸ್ತರಿಸಿಕೊಂಡಿದ್ದೀರಿ, ಅದೇ ರೀತಿ ಉದ್ದಿಮೆದಾರರಿಗೂ ಕೂಡ ಅನುಕೂಲ ಆಗಬೇಕಲ್ಲವೆ ಎಂದು ಪ್ರಶ್ನಿಸಿದ ಅವರು, ಉದ್ದಿಮೆದಾರರಿಗೆ ಅನುಕೂಲವಾಗುವಂತೆ ಸಬ್ ಲೀಸ್ ಅವಧಿಯನ್ನು 10 ವರ್ಷಗಳ ಅವಧಿಗೆ ವಿಸ್ತರಿಸಿ ಕೆಐಎಡಿಬಿ ನಿಯಮಗಳಲ್ಲಿ ತಿದ್ದುಪಡಿ ತರಲು ಏಕಗವಾಕ್ಷಿ ಸಮಿತಿಯಿಂದ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲು ಅಧಿಕಾರಿಗಳಿಗೆ ಸೂಚನೆ ನೀಡಿದರು.



ಅಕ್ಷಯ ಫುಡ್ ಪಾರ್ಕ್‌ನಲ್ಲಿ ತಮಗೆ ಹಂಚಿಕೆಯಾಗಿರುವ ನಿವೇಶನದಲ್ಲಿ ಇತರೆ ವ್ಯಕ್ತಿಗಳು ಶೆಡ್ ಮನೆ ಹಾಕಿಕೊಂಡಿದ್ದು, ಇದನ್ನು ತೆರವುಗೊಳಿಸಿಕೊಡುವಂತೆ ಹಲವು ಬಾರಿ ಕೋರಿದರೂ, ಫುಡ್ ಪಾರ್ಕ್‌ನ ಅಧಿಕಾರಿಗಳು ಸ್ಪಂದಿಸುತ್ತಿಲ್ಲ, ಇದರಿಂದಾಗಿ ತಮಗೆ ಇಲ್ಲಿ ಉದ್ದಿಮೆ ಪ್ರಾರಂಭಕ್ಕೆ ತೀವ್ರ ತೊಂದರೆಯಾಗುತ್ತಿದೆ. ಸಾಲ ಮಾಡಿ 12 ಲಕ್ಷ ರೂ. ಬಂಡವಾಳ ಹಾಕಿ, ಸಂಕಷ್ಟಕ್ಕೆ ಸಿಲುಕಿದ್ದೇವೆ ಎಂದು ಉದ್ಯಮಿ ವೆಂಕಟೇಶ್ ಅವರು ಸಭೆಯ ಗಮನಕ್ಕೆ ತಂದರು. ಇದಕ್ಕೆ ಸ್ಪಂದಿಸಿದ ಜಿಲ್ಲಾಧಿಕಾರಿಗಳು, ಫುಡ್ ಪಾರ್ಕ್‌ನಲ್ಲಿನ ಯಾವುದೇ ಒತ್ತುವರಿ ತೆರವು ಕಾರ್ಯ ಅಕ್ಷಯ ಫುಡ್ ಪಾರ್ಕ್‌ಗೆ ಸಂಬಂಧಿಸಿದ್ದಾಗಿದೆ. ಹೀಗಾಗಿ ಕೂಡಲೆ ತೆರವುಗೊಳಿಸಿಕೊಡುವಂತೆ ಸೂಚನೆ ನೀಡಿದರು. ಇದಕ್ಕೆ ಪ್ರತಿಕ್ರಿಯಿಸಿದ ಫುಡ್ ಪಾರ್ಕ್‌ನ ವ್ಯವಸ್ಥಾಪಕ ನಿರ್ದೇಶಕ ನಾರಾಯಣಸ್ವಾಮಿ ಅವರು, 02 ತಿಂಗಳ ಒಳಗಾಗಿ ತೆರವುಗೊಳಿಸುವುದಾಗಿ ಸಮ್ಮತಿ ಸೂಚಿಸಿದರು. ಚಳ್ಳಕೆರೆಯ ಬೊಮ್ಮಸಂದ್ರ ಕೈಗಾರಿಕಾ ವಸಾಹತುವಿನಲ್ಲಿ ಶ್ರೀ ಮಾರುತಿ ಎಕ್ಸ್‌ಪೋರ್ಟ್ ರೆಡಿಮೇಡ್ ಗಾರ್ಮೆಂಟ್ಸ್ ಕೈಗಾರಿಕಾ ಘಟಕದವರು ಉದ್ದಿಮೆ ಪ್ರಾರಂಭಿಸಲು ವಿದ್ಯುತ್ ಮತ್ತು ನೀರಿನ ಬೇಡಿಕೆ, ಪರಿಸರ ಮಾಲಿನ್ಯ ಇಲಾಖೆಯ ಸಮ್ಮತಿ ಇತ್ಯಾದಿಗಳ ಸೂಕ್ತತೆಯ ಬಗ್ಗೆ ಸಭೆಯಲ್ಲಿ ಚರ್ಚಿಸಿ ಯೋಜನೆ ಪ್ರಾರಂಭಕ್ಕೆ ಸಮಿತಿಯು ಒಪ್ಪಿಗೆ ಸೂಚಿಸಿತು.

ಜಿಲ್ಲೆಯ ಎಲ್ಲ ತಾಲ್ಲೂಕುಗಳು ಕೈಗಾರಿಕಾ ಸ್ಥಾಪನೆಯಲ್ಲಿ ಅತ್ಯಂತ ಹಿಂದುಳಿದಿವೆ, ಆದರೆ ಜಿಲ್ಲೆಯಲ್ಲಿ ಹೊಳಲ್ಕೆರೆ ತಾಲ್ಲೂಕು ಹೊರತುಪಡಿಸಿ, ಉಳಿದ ತಾಲ್ಲೂಕುಗಳನ್ನು ಕೈಗಾರಿಕಾ ಕ್ಷೇತ್ರದ ವಲಯದ ಹಿಂದುಳಿದ ವಲಯ 02 ರಲ್ಲಿ ಗುರುತಿಸಲಾಗಿದೆ. ಇದರಿಂದಾಗಿ ಸರ್ಕಾರದಿಂದ ಕೈಗಾರಿಕಾ ಕ್ಷೇತ್ರದ ಉತ್ತೇಜನೆಗೆ ಈ ತಾಲ್ಲೂಕುಗಳಲ್ಲಿ ಹೆಚ್ಚಿನ ಸೌಲಭ್ಯ ದೊರಕುತ್ತಿಲ್ಲ, ಹೀಗಾಗಿ ಜಿಲ್ಲೆಯ ಎಲ್ಲ ತಾಲ್ಲೂಕುಗಳನ್ನು ಅತ್ಯಂತ ಹಿಂದುಳಿದ ವಲಯ–01 ರಲ್ಲಿ ನಿಗದಿಪಡಿಸುವಂತೆ, ಕೈಗಾರಿಕಾ ಅಸೋಸಿಯೇಷನ್ ಅಧ್ಯಕ್ಷ ಕೆಂಚವೀರಪ್ಪ ಅವರು ಮನವಿ ಮಾಡಿದರು. ಪ್ರತಿಕ್ರಿಯಿಸಿದ ಜಂಟಿನಿರ್ದೇಶಕ ಬಿ. ಆನಂದ್ ಅವರು, ರಾಜ್ಯದಲ್ಲಿ ಪ್ರಸ್ತುತ ಹೊಸ ಕೈಗಾರಿಕಾ ನೀತಿ ರೂಪಿಸುವ ಬಗ್ಗೆ ಚರ್ಚೆಗಳು ನಡೆದಿವೆ, ಹೀಗಾಗಿ ಜಿಲ್ಲೆಯ ಎಲ್ಲ ತಾಲ್ಲೂಕುಗಳ ಕೂಡ ವಲಯ–01 ರಲ್ಲಿ ಬರುವ ಸಾಧ್ಯತೆ ಇದೆ ಎಂದರು. ಜಿಲ್ಲಾಧಿಕಾರಿಗಳು ಮಾತನಾಡಿ, ಜಿಲ್ಲೆಯ ಎಲ್ಲ ತಾಲ್ಲೂಕುಗಳನ್ನು ವಲಯ–01 ರಲ್ಲಿ ನಿಗದಿಪಡಿಸಲು ಅಗತ್ಯ ಪ್ರಸ್ತಾವನೆಯನ್ನು ಕಳುಹಿಸಿಕೊಡುವಂತೆ ಸೂಚನೆ ನೀಡಿದರು.

ಕೈಗಾರಿಕಾ ಪ್ರದೇಶ ಸ್ಥಾಪನೆಗೆ ಸಮೀಕ್ಷೆ ನಡೆಸಿ: ಮೊಳಕಾಲ್ಮುರು ಪಟ್ಟಣದಲ್ಲಿ 15 ಸಾವಿರ ಜನಸಂಖ್ಯೆ ಹೊಂದಿದ್ದು, ಸಾಕಷ್ಟು ಕೈಗಾರಿಕೆಗಳು ಇರುವುದರಿಂದ ಮೊಳಕಾಲ್ಮುರು ಪಟ್ಟಣದಲ್ಲಿ ಒಂದು ಕೈಗಾರಿಕಾ ಪ್ರದೇಶ ಸ್ಥಾಪಿಸುವಂತೆ ಮೊಳಕಾಲ್ಮುರು ನಾಗರಿಕ ಹಿತ ರಕ್ಷಣಾ ಸಮಿತಿ ಮನವಿ ಸಲ್ಲಿಸಿದ್ದು, ಮೊಳಕಾಲ್ಮುರು ಪಟ್ಟಣದಲ್ಲಿ ಕೈಗಾರಿಕೆ ಪ್ರದೇಶ ಸ್ಥಾಪಿಸಲು ನೀರು, ವಿದ್ಯುತ್, ಜಮೀನು, ಬೇಡಿಕೆ ಕುರಿತು ಜಂಟಿ ಸಮೀಕ್ಷೆ ಮಾಡಿ ವರದಿ ಸಲ್ಲಿಸುವಂತೆ ಜಿಲ್ಲಾಧಿಕಾರಿಗಳು ಅಧಿಕಾರಿಗಳಿಗೆ ಸೂಚನೆ ನೀಡಿದರು.

ನಿಗಧಿತ ಸಮಯಕ್ಕೆ ಸಾಲಸೌಲಭ್ಯ ಮಂಜೂರಾತಿಗೆ ತಾಕೀತು: ಪ್ರಧಾನಮಂತ್ರಿಗಳ ಉದ್ಯೋಗ ಸೃಜನ (ಪಿಎಂಇಜಿಪಿ) ಕಾರ್ಯಕ್ರಮದಡಿಯಲ್ಲಿ ಉತ್ಪಾದನಾ, ಸೇವಾ ಘಟಕಗಳಿಗೆ ನಿಗಧಿತ ಸಮಯದಲ್ಲಿ ಸಾಲಸೌಲಭ್ಯ ಮಂಜೂರಾತಿಗೆ ಅಗತ್ಯ ಕ್ರಮವಹಿಸಬೇಕು ಎಂದು ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್. ಜೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಿಲ್ಲಾ ಕೈಗಾರಿಕಾ ಕೇಂದ್ರದಿಂದ ಪಿಎಂಇಜಿಪಿ ಯೋಜನೆಯಡಿಯಲ್ಲಿ ಜುಲೈ–2023ರವರೆಗೆ ಆನ್‌ಲೈನ್‌ನಲ್ಲಿ 170 ಅರ್ಜಿಗಳು ಸ್ವೀಕೃತವಾಗಿದ್ದು, ಅರ್ಜಿಗಳನ್ನು ಯೋಜನೆಯ ನಿಯಮದಂತೆ ಪರಿಶೀಲಿಸಿ 147 ಅರ್ಜಿಗಳನ್ನು ಬ್ಯಾಂಕಿಗೆ ಶಿಫಾರಸ್ಸು ಮಾಡಲಾಗಿದ್ದು, 63 ಭೌತಿಕ ಗುರಿಗೆ 35 ಮಂಜೂರಾಗಿವೆ ಎಂದು ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕ ಬಿ.ಆನಂದ್ ತಿಳಿಸಿದರು.ಖಾದಿ ಗ್ರಾಮೋದ್ಯಗ ಮಂಡಳಿ (ಕೆವಿಐಬಿ) ವತಿಯಿಂದ ಪಿಎಂಇಜಿಪಿ ವತಿಯಿಂದ ಪಿಎಂಇಜಿಪಿ ಯೋಜನೆಯಡಿಯಲ್ಲಿ ಜುಲೈ–2023ರವರೆಗೆ ಆನ್‌ಲೈನ್‌ನಲ್ಲಿ 70 ಅರ್ಜಿಗಳು ಸ್ವೀಕೃತವಾಗಿದ್ದು, 51 ಅರ್ಜಿಗಳನ್ನು ಬ್ಯಾಂಕಿಗ್ ಶಿಫಾರಸ್ಸು ಮಾಡಲಾಗಿದೆ. 40 ಭೌತಿಕ ಗುರಿಗೆ 11 ಮಂಜೂರಾಗಿವೆ ಎಂದು ಕೆವಿಐಬಿಯ ಸುಜಾತಾ ಸಭೆಗೆ ತಿಳಿಸಿದರು.

ಸಭೆಯಲ್ಲಿ ಅಕ್ಷಯ ಫುಡ್ ಪಾರ್ಕ್‌ನ ವ್ಯವಸ್ಥಪಕ ನಿರ್ದೇಶಕ ನಾರಾಯಣಸ್ವಾಮಿ, ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿನಿರ್ದೇಶಕ ಬಿ. ಆನಂದ್, ಕೆಐಎಡಿಬಿ ಅಧಿಕಾರಿ ಲಕ್ಷ್ಮೀಶ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ಉದ್ದಿಮೆದಾರರು ಭಾಗವಹಿಸಿದ್ದರು.

## ಗೃಹಲಕ್ಷ್ಮಿ ಯೋಜನೆ ಉದ್ಘಾಟಿಸಿದ ಗೋಪಾಲಕೃಷ್ಣ

» ಮೊಳಕಾಲ್ಮುರು

ಮೊಳಕಾಲ್ಮೂರು. ಮನೆ ಮನೆಗೆ ಲಕ್ಷ್ಮಿ ಕಾಂಗ್ರೆಸ್ ಸರ್ಕಾರದಿಂದ ಮಹಿಳೆಯರಗಿ ಗೃಹಲಕ್ಷ್ಮಿ ಯೋಜನೆ ಗಿಫ್ಟ್ ನೀಡಿದೆ ಮನೆ ಯಜಮಾನಿಗೆ 2000 ರೂಪಾಯಿ ಖಾತೆಗೆ ಜಮೆ ಮಾಡುವುದರ ಮೂಲಕ ಕಾಂಗ್ರೆಸ್ ಸರ್ಕಾರವು ಬಡವರ ಪರವಾಗಿ ನಿಂತಿದೆ ಎಂದು ಶಾಸಕರಾದ ಎನ್ ವೈ ಗೋಪಾಲಕೃಷ್ಣ ತಿಳಿಸಿದರು

ಮೊಳಕಾಲ್ಮುರು ಪಟ್ಟಣದ ತಾಲೂಕು ಪಂಚಾಯಿತಿಆವರಣದಲ್ಲಿಗೃಹಲಕ್ಷ್ಮಿಯೋಜನೆಯ ಅಧ್ಯಕ್ಷತೆ ವಹಿಸಿ ದೀಪ ಬೆಳಗುವುದರ ಮೂಲಕ ಉದ್ಘಾಟಿಸಿ ಮಾತನಾಡಿದರು

ಮಹಿಳೆಯರು ಕಾತುರದಿಂದ ಕಾಯುತ್ತಿದ್ದ ಗ್ರಹಲಕ್ಷ್ಮಿ ಯೋಜನೆಗೆ ಇಂದು ನಮ್ಮ ಕಾಂಗ್ರೆಸ್ ಸರ್ಕಾರ ಚಾಲನೆ ನೀಡುತ್ತಿದೆ

ಕಾಂಗ್ರೆಸ್ ಸರ್ಕಾರವು ಚುನಾವಣೆಯಲ್ಲಿ ನೀಡಿದ ಐದು ಗ್ಯಾರಂಟಿಗಳಲ್ಲಿ ನಾಲ್ಕು ಗ್ಯಾರಂಟಿಗಳದ ಅನ್ನಭಾಗ್ಯ. ಮಹಿಳೆಯರಿಗೆ ಉಚಿತ ಬಸ್ ಪ್ರಯಾಣ ಮನೆಮನೆಗೆ ಉಚಿತ ವಿದ್ಯುತ್ ಮತ್ತು ಗೃಹಲಕ್ಷ್ಮಿ ಯೋಜನೆ ಗಳನ್ನು ಕೊಟ್ಟ ಮಾತಿನಂತೆ ನಮ್ಮಕಾಂಗ್ರೆಸ್ ಸರ್ಕಾರ



ಈಡೇರಿಸಿದೆ. ಈ ಹಿಂದೆ ಮಾಜಿ ಪ್ರಧಾನಿ ಶ್ರೀಮತಿ ಇಂದಿರಾ ಗಾಂಧಿಯವರು ದೇಶದಲ್ಲಿ ಬರಗಾಲ ಬಂದಾಗ ಕೆಂಪು ಜೋಳವನ್ನು ನೀಡಿ ರಾಜ್ಯದ ಜನರ ಹಸಿವನ್ನು ನೀಗಿಸುವ ಕೆಲಸ ಮಾಡಿದರು ಕಾಂಗ್ರೆಸ್ ಸರ್ಕಾರ ನೀಡುವ 2000 ರೂಪಾಯಿಗಳನ್ನು ದುರ್ಬಳಕೆ ಮಾಡದೆ ಸದ್ಬಳಕೆ ಮಾಡಿಕೊಳ್ಳಬೇಕು. ಗೃಹಲಕ್ಷ್ಮಿ ಯೋಜನೆಯಿಂದ ಕೋಟ್ಯಾಂತರ ತಾಯಂದಿರಿಗೆ ಅನುಕೂಲವಾಗಲಿದೆ ಎಂದರು ತಹಸಿಲ್ದಾರ್ ಎಂ ವಿ ರೂಪ ಮಾತನಾಡಿ ರಾಜ್ಯ ಸರ್ಕಾರದ ಈ ಯೋಜನೆಯಿಂದ ಮಹಿಳೆಯರ ಆರ್ಥಿಕ ಸಬಲೀಕರಣದ ಉದ್ದೇಶದಿಂದ ಮನೆಯ ಯಜಮಾನಿ .2000 ರೂ ನೀಡಿ ಮಹಿಳೆಯರಿಗೆ ತುಂಬಾ ಅನುಕೂಲ ಮಾಡಿಕೊಟ್ಟಿದೆ ಎಂದರು

## ಪಾಲಿಕೆ ವಿಭಾಗೀಯ ಕಚೇರಿ ಸ್ಥಳಾಂತರಕ್ಕೆ ಆಗ್ರಹ

» ದಾವಣಗೆರೆ

ಮಹಾನಗರ ಪಾಲಿಕೆ ಆವರಣದಲ್ಲಿದ್ದ ಕಂದಾಯ ಇಲಾಖೆಯ ವಿಭಾಗವನ್ನು ರಾಷ್ಟ್ರೀಯ ಹೆದ್ದಾರಿಯ ಜಿಲ್ಲಾಪಂಚಾಯತ್ ಎದುರಿನ ಸರ್ಕ್ಯೂಟ್ ಹೌಸ್ ಪಕ್ಕಕ್ಕೆ ಸ್ಥಳಾಂತರಿಸಿದ್ದು, ಇದರಿಂದ ಸಾರ್ವಜನಿಕರಿಗೆ ಅನುಕೂಲಕ್ಕಿಂತ ಅನಾನುಕೂಲವೇ ಹೆಚ್ಚಾಗಿದ್ದು, ಕಾರಣ ಕಂದಾಯ ಇಲಾಖೆಯ ವಿಭಾಗವನ್ನು ಮತ್ತೆ ಮಹಾನಗರ ಪಾಲಿಕೆ ಆವರಣಕ್ಕೆ ಸ್ಥಳಾಂತರ ಮಾಡುವಂತೆ ಆಗ್ರಹಿಸಿ, ಶ್ರೀ ಆಂಜನೇಯ ಮಿಲ್ ಎಂಪ್ಲಾಯ್ಸ್ ಯೂನಿಯನ್‌ನ ಅಧ್ಯಕ್ಷ ಹೆಚ್.ಜಿ.ಉಮೇಶ್ ಜಿಲ್ಲಾ ಉಸ್ತುವಾರಿ ಸಚಿವರಿಗೆ ಮನವಿ ಮಾಡಿದ್ದಾರೆ.

ಈ ಕುರಿತ ಮನವಿಯೊಂದನ್ನು ಜಿಲ್ಲಾ ಉಸ್ತುವಾರಿ ಸಚಿವರಿಗೆ ನೀಡಿದ್ದು, ಈ ಕುರಿತು ಪ್ರತಿಕ್ರಿಯಿಸಿರುವ ಜಿಲ್ಲಾ ಉಸ್ತುವಾರಿ ಸಚಿವ ಎಸ್.ಎಸ್.ಮಲ್ಲಿಕಾರ್ಜುನ್ ಅವರು, ಈ ಕುರಿತು ಪಾಲಿಕೆ ಆಯುಕ್ತರಿಗೆ ಸೂಕ್ತ ನಿರ್ದೇಶನ ನೀಡುವುದಾಗಿ ಭರವಸೆ ನೀಡಿದ್ದಾರೆ. ಅಲ್ಲದೇ ಈ ಕುರಿತು ಪಾಲಿಕೆ ಆಯುಕ್ತರೊಂದಿಗೆ ಮಾತನಾಡಿದಾಗ, ಈ ಕುರಿತು ಸಭೆ ಕರೆದು ಮುಂದಿನ ಕ್ರಮ ಕೈಗೊಳ್ಳುವುದಾಗಿ ತಿಳಿಸಿದ್ದಾರೆ ಎಂದು ಉಮೇಶ್ ತಿಳಿಸಿದ್ದಾರೆ. ಸಾರ್ವಜನಿಕರಿಗೆ, ಸಂಘ, ಸಂಸ್ಥೆಗಳಿಗೆ ಯಾವುದೇ ಮಾಹಿತಿ ನೀಡದೆ ನಗರದ ಹೊರ ವಲಯಕ್ಕೆ ಕಚೇರಿಯನ್ನು ಸ್ಥಳಾಂತರ ಮಾಡಿರುವ ಕಾರಣ ಆವರಗೆರೆ, ಶೇಖರಪ್ಪ ನಗರ, ಬಸಾಪುರ ಸೇರಿದಂತೆ ಇದರ ವ್ಯಾಪ್ತಿಗೆ ಬರುವ ಎಲ್ಲಾ ಸಾರ್ವಜನಿಕರಿಗೆ ತೀವ್ರ ತೊಂದರೆ ಆಗಿದೆ.

**ಪ್ರಮುಖ ಸುದ್ದಿ**

# ಭಾರತೀಯ ಮಹಿಳೆಯರು ಸಂಸ್ಕಾರದಲ್ಲಿ ವಿಶ್ವಕ್ಕೆ ಮಾದರಿ

» ಹೊಸದುರ್ಗ

ಭಾರತ ದೇಶದ ಮಹಿಳೆಯರು ನಿತ್ಯವೂ ಕೂಡ ನನ್ನ ಕುಟುಂಬ, ಪತಿ, ಮಕ್ಕಳು, ರಾಜ್ಯ, ದೇಶ ಮತ್ತು ವಿಶ್ವಕ್ಕೆ ಒಳಿತಾಗಲಿ ಎಂದು ಬಯಸುತ್ತಾರೆ. ಭಾರತೀಯ ನಾರಿಯರಿಗಿರುವಂತಹ ಸಂಸ್ಕೃತಿ ಮತ್ತು ಶಕ್ತಿಯನ್ನು ಬೇರಾವ ದೇಶದ ಮಹಿಳೆಯರಲ್ಲಿಯೂ ಕಾಣಲು ಸಾಧ್ಯವಿಲ್ಲವೆಂದು ಕುಂಚಿಟಿಗ ಮಠದ ಪೀಠಾಧ್ಯಕ್ಷ ಶ್ರೀ ಶಾಂತವೀರ ಸ್ವಾಮೀಜಿ ಹೇಳಿದರು.

ತಾಲೂಕಿನ ಕಸಬಾ ಹೋಬಳಿಯ ಬಾಗೂರು ಗ್ರಾಮದ ಚನ್ನಕೇಶವ ಸ್ವಾಮಿ ದೇವಾಲಯದ ಸಭಾಂಗಣದಲ್ಲಿ ಗುರುವಾರ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ, ಪ್ರಗತಿ ಬಂಧು ಸ್ವಸಹಾಯ ಸಂಘಗಳ ಒಕ್ಕೂಟ, ಶ್ರೀ ಚನ್ನಕೇಶವ ಸ್ವಾಮಿ ದೇವಾಲಯ ಸಮಿತಿ ಹಾಗೂ ಇತರೆ ಸಂಘ ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ ಆಯೋಜಿಸಿದ್ದ ಸಾಮೂಹಿಕ ಶ್ರೀ ಸತ್ಯನಾರಾಯಣ ಪೂಜೆ ಹಾಗೂ ಧಾರ್ಮಿಕ ಸಭಾ ಕಾರ್ಯಕ್ರಮದ ದಿವ್ಯ ಸಾನಿಧ್ಯವಹಿಸಿ ಅವರು ಮಾತನಾಡಿದರು.



ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯು ಬಡವರ ಪಾಲಿಗೆ ಕಾಮಧೇನುವಿನ ರೀತಿಯಲ್ಲಿ ಜನಪರ ಕಾರ್ಯಗಳನ್ನು ಮಾಡುತ್ತಿದೆ. ಮೂಲಸೌಕರ್ಯಗಳಿಂದ ವಂಚಿತವಾಗಿರುವ ಗ್ರಾಮಗಳಿಗೆ ಸಾಧ್ಯವಾದಷ್ಟು ಸೌಲಭ್ಯ ಒದಗಿಸುವುದು, ಬಡ ಕುಟುಂಬದ ಪ್ರತಿಭಾನ್ವಿತ ಮಕ್ಕಳನ್ನು ಪುರಸ್ಕರಿಸುವುದು, ಅಂಗವಿಕಲರಿಗೆ ಸಹಾಯಧನ ನೀಡುವುದು ಮತ್ತು ಮಧ್ಯಪ್ರಿಯರನ್ನು ಮಧ್ಯವ್ಯಸನದಿಂದ ಹೊರ ತರಲು ಮಧ್ಯವರ್ಜನ ಶಿಬಿರಗಳ ಆಯೋಜನೆ ಸೇರಿದಂತೆ ಹಲವಾರು ಸಮಾಜಮುಖಿ ಕಾರ್ಯಗಳನ್ನು ಕೈಗೆತ್ತಿಕೊಂಡಿದೆ. ಶ್ರೀ ಕ್ಷೇತ್ರ ಧರ್ಮಸ್ಥಳ ಬರೀ ಶ್ರದ್ಧಾ ಕೇಂದ್ರವಾಗದೆ, ಜ್ಞಾನ ಕೇಂದ್ರ ಮತ್ತು ದಾಸೋಹ ಕೇಂದ್ರವನ್ನಾಗಿ ಮಾಡಿದ್ದಾರೆ. ಈ ಶ್ರೇಯಸ್ಸು ಕ್ಷೇತ್ರದ ಧರ್ಮಾಧಿಕಾರಿ ವೀರೇಂದ್ರ ಹೆಗಡೆಯವರಿಗೆ ಸಲ್ಲುತ್ತದೆ ಎಂದು ಹೇಳಿದರು.

ಈ ವೇಳೆ ಕಾರ್ಯಕ್ರಮದಲ್ಲಿ ಬಾಗೂರು ಗ್ರಾಮ ಪಂಚಾಯಿತಿ ಅಧ್ಯಕ್ಷೆ ಶಾರದಮ್ಮ, ಉಪಾಧ್ಯಕ್ಷೆ ರಂಜಿತಾ ರಮೇಶ್, ಸಾಣೆಹಳ್ಳಿ ಗ್ರಾಮ ಪಂಚಾಯಿತಿ ಅಧ್ಯಕ್ಷೆ ಪ್ರೇಮ ಬಸವರಾಜಪ್ಪ, ಶಿಕ್ಷಕ ಸೋಮಶೇಖರಪ್ಪ, ಪ್ರಾದೇಶಿಕ ನಿರ್ದೇಶಕಿ ಗೀತಾ, ಮುಖಂಡರಾದ ಪರಪ್ಪ, ರಾಗಿ ಶಿವಮೂರ್ತಿ ಮತ್ತು ಜಿಲ್ಲಾ ಜನಜಾಗೃತಿ ವೇದಿಕೆ ಸದಸ್ಯ ತುಂಬಿನಕೆರೆ ಬಸವರಾಜ್ ಸೇರಿದಂತೆ ಹಲವು ಮುಖಂಡರು ಹಾಗೂ ನೂರಾರು ಜೋಡಿ ಸತಿಪತಿಗಳು ಪಾಲ್ಗೊಂಡಿದ್ದರು.

## ಫಾಸ್ಟ್ ನ್ಯೂಸ್

### ಜೆಡಿಎಸ್ ಶಾಸಕರಿಗೆ ಶಾಕ್ ನೀಡಿದ ಸರ್ಕಾರ

ಜೆಡಿಎಸ್ ಶಾಸಕರಿಗೆ ರಾಜ್ಯ ಸರ್ಕಾರ ಶಾಕ್ ಕೊಟ್ಟಿದೆ. ಜೆಡಿಎಸ್ ಶಾಸಕರ ಕ್ಷೇತ್ರಕ್ಕೆ ಮಂಜೂರಾಗಿದ್ದ ಮನೆಗಳನ್ನು ಶಿಫ್ಟ್ ಮಾಡಿದ್ದು ಕಾಂಗ್ರೆಸ್ ಕ್ಷೇತ್ರದ ಶಾಸಕರಿಗೆ ಮನೆ ಮಂಜೂರು ಮಾಡಿದೆ. ತುರುವೇಕೆರೆಗೆ ಮಂಜೂರು ಆಗಿದ್ದ 3,375 ಮನೆಗಳನ್ನು ಕುಣಿಗಲ್‌ಗೆ ಶಿಫ್ಟ್ ಮಾಡಿದೆ. ಈ ಹಿನ್ನೆಲೆ ವಸತಿ ಇಲಾಖೆ ಸಚಿವ ಜಮೀರ್ ವಿರುದ್ಧ ಶಾಸಕ ಎಂ.ಟಿ.ಕೃಷ್ಣಪ್ಪ ಆಕ್ರೋಶ ಹೊರ ಹಾಕಿದ್ದಾರೆ.

### ತಂದೆ ಆರೋಗ್ಯ ವಿಚಾರಿಸಲು ಆಸ್ಪತ್ರೆಗೆ ಬಂದ ನಿಖಿಲ್

ಬೆಂಗಳೂರಿನ ಜಯನಗರ ಅಪೋಲೊ ಆಸ್ಪತ್ರೆಯಲ್ಲಿ ಊಆಏಗೆ ಚಿಕಿತ್ಸೆ ಹಿನ್ನೆಲೆ ತಂದೆ ಆರೋಗ್ಯ ವಿಚಾರಿಸಲು ನಿಖಿಲ್ ಕುಮಾರಸ್ವಾಮಿ ಆಸ್ಪತ್ರೆಗೆ ಆಗಮಿಸಿದ್ದಾರೆ. ವಿದೇಶ ಪ್ರವಾಸದಲ್ಲಿದ್ದ ನಿಖಿಲ್ ಕುಮಾರಸ್ವಾಮಿ ತಂದೆಗೆ ಅನಾರೋಗ್ಯ ಹಿನ್ನೆಲೆ ವಿದೇಶದಿಂದ ವಾಪಸಾಗಿದ್ದಾರೆ.

### ಕುಮಾರಸ್ವಾಮಿ ಐಸಿಯುನಿಂದ ವಾರ್ಡ್‌ಗೆ ಶಿಫ್ಟ್

ಅನಾರೋಗ್ಯದಿಂದ ಜಯನಗರ ಅಪೋಲೊ ಆಸ್ಪತ್ರೆಗೆ ದಾಖಲಾಗಿರುವ ಊ.ಆ.ಕುಮಾರಸ್ವಾಮಿ ಅವರನ್ನು ಐಸಿಯುನಿಂದ ವಾರ್ಡ್‌ಗೆ ಶಿಫ್ಟ್ ಮಾಡಲಾಗಿದೆ. ಮೂರು ದಿನಗಳ ಕಾಲ ವೈದ್ಯರು ವಾರ್ಡ್‌ನಲ್ಲೇ ನಿಗಾ ವಹಿಸಲಿದ್ದಾರೆ. ಹೆಚ್ .ಡಿ.ಕುಮಾರಸ್ವಾಮಿ ನಿನ್ನೆಯಿಂದ ಖಅಗನಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಆರೋಗ್ಯದಲ್ಲಿ ಚೇತರಿಕೆ ಹಿನ್ನೆಲೆ ವಾರ್ಡ್‌ಗೆ ಶಿಫ್ಟ್ ಮಾಡಲಾಗಿದೆ.

### ಕಲಬುರಗಿ ಪಾಲಿಕೆ ಕಚೇರಿಗೆ ನುಗ್ಗಿ ಸಚಿವ ಪ್ರಿಯಾಂಕ್ ಖರ್ಗೆ ಬೆಂಬಲಿಗರ ಹಲ್ಲೆ

ಕಲಬುರಗಿ ಮಹಾನಗರ ಪಾಲಿಕೆ ಕಚೇರುಗೆ ನುಗ್ಗಿ ಹೆಲ್ತ್ ಇನ್ಸ್‌ಪೆಕ್ಟರ್ ಧನಶೆಟ್ಟಿ ಮೇಲೆ ಹಲ್ಲೆ ನಡೆಸಲಾಗಿದೆ. ಸಚಿವ ಪ್ರಿಯಾಂಕ್ ಖರ್ಗೆ ಬೆಂಬಲಿಗ ಅವಿನಾಶ್ ಭಾಸ್ಕರ್ ಪಾಲಿಕೆ ಉಪ ಆಯುಕ್ತರ ಮುಂದೆಯೇ ಹೆಲ್ತ್ ಇನ್ಸ್‌ಪೆಕ್ಟರ್ ಮೇಲೆ ಹಲ್ಲೆ ನಡೆಸಿದ್ದಾರೆ. ಟ್ರೇಡ್ ಲೈಸೆನ್ಸ್ ವಿಚಾರವಾಗಿ ಗಲಾಟೆ ತೆಗೆದು ಹಲ್ಲೆ ಮಾಡಲಾಗಿದೆ.

### ಕೆಂಪೇಗೌಡ ಏರ್ ಪೋರ್ಟ್‌ನಿಂದ ಶಿವಮೊಗ್ಗಕ್ಕೆ ಹೊರಟ ಮೊದಲ ವಿಮಾನ

ಕೆಂಪೇಗೌಡ ಏರ್‌ಪೋರ್ಟ್‌ನಿಂದ ಶಿವಮೊಗ್ಗಕ್ಕೆ ಮೊದಲ ವಿಮಾನ ಹೊರಟಿದ್ದು 11 ಗಂಟೆಗೆ ಶಿವಮೊಗ್ಗ ಏರ್ಪೋರ್ಟ್‌ನಲ್ಲಿ ಲ್ಯಾಂಡ್ ಆಗಲಿದೆ. ಮೊದಲ ವಿಮಾನದಲ್ಲಿ ಬಿ.ಎಸ್.ಯಡಿಯೂರಪ್ಪ, ಸಚಿವ ಎಂ.ಬಿ.ಪಾಟೀಲ್, ಶಾಸಕರಾದ ಆರಗ ಜ್ಞಾನೇಂದ್ರ, ವಿಜಯೇಂದ್ರ, ಬೇಳೂರು ಗೋಪಾಲಕೃಷ್ಣ, ಸಂಸದ ಬಿ.ವೈ.ರಾಘವೇಂದ್ರ, ಮಾಜಿ ಶಾಸಕ ಹರತಾಳು ಹಾಲಪ್ಪ ಪ್ರಯಾಣ ಬೆಳೆಸಿದ್ದಾರೆ.

### ವಾಹನಗಳಿಗೆ ಲೈಫ್ ಟೈಮ್ ಟ್ಯಾಕ್ಸ್ ಪಾವತಿಗೆ ಸರ್ಕಾರ ಆದೇಶ: ಕಿಡಿ

ವಾಹನಗಳಿಗೆ ಲೈಫ್ ಟೈಮ್ ಟ್ಯಾಕ್ಸ್ ಪಾವತಿಗೆ ಸರ್ಕಾರ ಆದೇಶ ಹೊರಡಿಸಿದ್ದು ಸರ್ಕಾರದ ಆದೇಶದ ವಿರುದ್ಧ ಗೂಡ್ಸ್, ಟ್ರಕ್ ಮಾಲೀಕರು ಆಕ್ರೋಶ ಹೊರ ಹಾಕಿದ್ದಾರೆ. ಬೆಂಗಳೂರಿನ ಶಾಂತಿನಗರದ ರಸ್ತೆಯುದ್ದಕ್ಕೂ ಗೂಡ್ಸ್ ವಾಹನ ನಿಲ್ಲಿಸಿ ಆರ್‌ಟಿಒ ಕಚೇರಿ ಬಳಿ ಪ್ರತಿಭಟನೆ ನಡೆಸಲಾಗುತ್ತಿದೆ. 250ಕ್ಕೂ ಹೆಚ್ಚು ಟ್ರಕ್‌ಗಳನ್ನು ನಿಲ್ಲಿಸಿ ರಸ್ತೆ ಬಂದ್ ಮಾಡಿ ಧರಣಿ ನಡೆಸುತ್ತಿದ್ದಾರೆ.

### ಅನಾರೋಗ್ಯ ರೈಲಿಗೆ ಸಿಲುಕಿ ವ್ಯಕ್ತಿ ಸಾವು

ಅನಾರೋಗ್ಯ ಹಿನ್ನಲೆ ರೈಲಿಗೆ ಸಿಲುಕಿ ಮುನಿರಾಜು(56) ಎಂಬ ವ್ಯಕ್ತಿ ಮೃತಪಟ್ಟ ಘಟನೆ ಕೋಲಾರ ಜಿಲ್ಲೆಯ ಬಂಗಾರಪೇಟೆ ತಾಲ್ಲೂಕು ಹುಣಸನಹಳ್ಳಿ ಬಳಿ ನಡೆದಿದೆ. ಮೃತ ಮುನಿರಾಜು ಕಳೆದ ಹಲವು ದಿನಗಳಿಂದ ಕಿಡ್ನಿ ವೈಫಲ್ಯವಾಗಿ ಡಯಾಲಿಸಿಸ್ ನಲ್ಲಿದ್ದರು. ಇತ್ತೀಚೆಗೆ ಅನಾರೋಗ್ಯ ತೀವ್ರವಾಗಿ ಮನನೊಂದು ರೈಲಿಗೆ ಸಿಲುಕಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ರೈಲಿಗೆ ಎದೆಯೊಡ್ಡಿದ ಹಿನ್ನೆಲೆ ದೇಹ ಎರಡು ತುಂಡಾಗಿದೆ. ಬಂಗಾರಪೇಟೆ ರೈಲ್ವೆ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಪ್ರಕರಣ ದಾಖಲಾಗಿದೆ.

# ಲಿಂಗಪೂಜೆಗಿಂತ ಕಾಯಕ ಶ್ರೇಷ್ಠ ಎಂಬ ತತ್ವ ಸಾರಿದ ನುಲಿಯ ಚಂದಯ್ಯ: ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ

» **ಚಿತ್ರದುರ್ಗ**

ಲಿಂಗಪೂಜೆ ಹಾಗೂ ಕಾಯಕ ಶರಣ ತತ್ವದ ಮೂಲಗಳು. ಆದರೆ ಎರೆಡರಲ್ಲಿ ಲಿಂಗಪೂಜೆಗಿಂತ ಕಾಯಕ ಶ್ರೇಷ್ಠ ಎಂಬುದನ್ನು ಶಿವಶರಣ ಶ್ರೀ ನುಲಿಯ ಚಂದಯ್ಯನವರು ಜಗತ್ತಿಗೆ ಸಾರಿದ್ದಾರೆ ಎಂದು ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಹೇಳಿದರು.

ಗುರುವಾರ ನಗರದ ತರಾಸು ರಂಗಮಂದಿರಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರ ಸಭೆ ಸಹಯೋಗದಲ್ಲಿ ಆಯೋಜಿಸಲಾಗಿದ್ದ ಶ್ರೀ ನುಲಿಯ ಚಂದಯ್ಯ ಅವರ ಜಯಂತಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

'ಗುರುವಾದರೂ ಕಾಯಕದಿಂದಲೇ ಮುಕ್ತಿ. ಲಿಂಗವಾದರೂ ಕಾಯಕದಿಂದಲೇ ವೇಷದ ಪಾಶ ಹರಿಯುವುದು' ಎಂದು ನುಲಿಯ ಚಂದಯ್ಯನವರು ಹೇಳಿದ್ದಾರೆ. ನಾವು ಮಾಡುವ ದಾಸೋಹವು ಪ್ರಾಮಾಣಿಕ ದುಡಿಮೆಯಿಂದ ಗಳಿಸಿದ ಹಣದಲ್ಲಿ ಮಾಡಬೇಕು. ಅಪ್ರಮಾಣಿಕವಾಗಿ ದುಡಿದು ದಾಸೋಹ ಮಾಡುವವರನ್ನು ಖಂಡಿಸಿದ ನುಲಿಯ ಚಂದಯ್ಯನವರು 'ಕಂದಿಸಿ, ಬಂದಿಸಿ, ಕಂಡವರ ಬೇಡಿ ತಂದು ಜಂಗಮಕ್ಕೆ ಮಾಡಿದೆನೆಂಬ ದಂದುಗದೋಹರ ಲಿಂಗಕ್ಕೆ ನೈವೇದ್ಯವಲ್ಲ' ಎಂದಿದ್ದಾರೆ ಎಂದು ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ತಿಳಿಸಿದರು.




ಬಹುದಿನ ಬೇಡಿಕೆಯಂತೆ ಕೊರಚ ಸಮಾಜಕ್ಕೆ ಜಮೀನು ನೀಡುವುದಕ್ಕೆ ಚಿತ್ರದುರ್ಗ ನಗರದ ಮಾಳಪನಹಟ್ಟಿ ಬಳಿ ಎರಡು ಎಕರೆ ಜಮೀನು ಈ ಹಿಂದೆಯೇ ಗುರುತಿಸಿಲಾಗಿದೆ. ಪ್ರಾಮಾಣಿಕವಾಗಿ ಪ್ರಯತ್ನ ಪಟ್ಟು ಶೀಘ್ರವೇ ಭೂಮಿಯನ್ನು ಕೊಡಿಸುವುದಾಗಿ ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಈ ಸಂದರ್ಭದಲ್ಲಿ ಆಶ್ವಾಸನೆ ನೀಡಿದರು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ನುಲಿಯ ಚಂದಯ್ಯನವರು ಕಾಯಕ ನಿಷ್ಠೆಗೆ ಹೆಸರಾದವರು. ಈಗಲೂ ಕೊರಚ ಸಮಾಜದವರು ಕಷ್ಟಪಟ್ಟು ದುಡಿಮೆ ಮಾಡುತ್ತಾರೆ. ಸರ್ಕಾರ ನೀಡಿರುವ ಸವಲತ್ತುಗಳನ್ನು ಉಪಯೋಗಿಸಿಕೊಂಡು ಸಮಾಜದವರು ಶೈಕ್ಷಣಿಕವಾಗಿ ಹಾಗೂ ಸಾಮಾಜಿಕವಾಗಿ ಪ್ರಗತಿ ಸಾಧಿಸಬೇಕು ಎಂದರು.

ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದ ಮುರುಘಾಮಠದ ಶ್ರೀ ಬಸವಪ್ರಭು ಸ್ವಾಮಿಜಿ ಅವರು ಕೊರಚ, ಕೊರಮ, ಭಜಂತ್ರಿಯಂತಹ ಹಲವು ಸಣ್ಣ ಸಮಾಜಗಳನ್ನು ಗುರುತಿಸಿದ ಕೀರ್ತಿ 12ನೇ ಶತಮಾನದ ಬಸವಣ್ಣನವರಿಗೆ ಸಲ್ಲುತ್ತದೆ. ಶಿವಶರಣ ನುಲಿಯ ಚಂದಯ್ಯನವರು ತೋರಿದ ಹಾದಿಯಲ್ಲಿ ಎಲ್ಲರೂ ನಡೆಯಬೇಕು. ಪೂಜೆ ಮಾಡಿದರೆ ಲಕ್ಷ್ಮೀ ಒಲಿಯುವುದಿಲ್ಲ. ಕಾಯಕ ಮಾಡಿದರೆ ಲಕ್ಷ್ಮೀ ಮನೆ ಬಾಗಿಲಿಗೆ ಬರುತ್ತಾಳೆ. ದಾಸೋಹಕ್ಕಿಂತ ಮಿಗಿಲಾದ ದೇವರ ಪೂಜೆ ಇಲ್ಲ. ನೊಂದವರ ಕಣ್ಣೀರು ಒರೆಸಿ, ಆಸರೆ ನೀಡಬೇಕು. ಕರುಣೆ, ದಾನ ಧರ್ಮದಲ್ಲಿ ದೇವರಿದ್ದಾನೆ. ಹೃದಯ ಶ್ರೀಮಂತಿಕೆ ಇಟ್ಟುಕೊಂಡು ಬೇರೆಯವರ ಕಷ್ಟಕ್ಕೆ ಸ್ಪಂದಿಸುವ ಕೆಲಸವನ್ನು ಎಲ್ಲರೂ ಮಾಡಬೇಕು ಎಂದು ಕರೆ ನೀಡಿದರು.

ಹರಪನಹಳ್ಳಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಉಪನ್ಯಾಸಕ ಡಾ.ನಾಗಪ್ಪ ಆರ್ ವಿಶೇಷ ಉಪನ್ಯಾಸ ನೀಡಿ, 12ನೇ ಶತಮಾನದಲ್ಲಿ ವಿಜಯಪುರ ಜಿಲ್ಲೆಯ ಶಿಂದಗಿ ತಾಲೂಕಿನ ಶಿವಣಗಿ ಗ್ರಾಮದಲ್ಲಿ ನುಲಿಯ ಚಂದಯ್ಯನವರ ಜನ್ಮವಾಯಿತು. ಶಿವಶರಣರ ಸಾಂಗತ್ಯದಲ್ಲಿ ಇದ್ದ ನುಲಿಯ ಚಂದಯ್ಯನವರು ಬಸವಕಲ್ಯಾಣದ ಕ್ರಾಂತಿಯಲ್ಲಿ ಪ್ರಮುಖ ಪಾತ್ರ ವಹಿಸಿದ್ದಾರೆ. ಬಸವಕಲ್ಯಾಣದ ತ್ರಿಪುರಾಂತಕ ಕೆರೆಯ ಬದಿಯ ಗದ್ದುಗೆಯ ಬಳಿಯ ಕಲ್ಲಿನ ಕೆತ್ತನೆಯಲ್ಲಿ ನುಲಿಯ ಚಂದಯ್ಯ ಖಡ್ಗ ಹಿಡಿದ ಚಿತ್ರವಿದೆ.

ಪ್ರತಿನಿತ್ಯವು ನುಲಿಯ ಕಾಯಕ ಮಾಡಿ ಚಂದಯ್ಯ ದಾಸೋಹ ನೆಡೆಸುತ್ತಿದ್ದರು. ಇದುವರೆಗೂ ನುಲಿಯ ಚಂದಯ್ಯನವರ 48 ವಚನಗಳನ್ನು ಗುರುತಿಸಲಾಗಿದೆ.

ಕಲ್ಯಾಣ ಕ್ರಾಂತಿ ನಂತರ ಉಳವಿಗೆ ಆಗಮಿಸಿದ ಚಂದಯ್ಯ ಅಲ್ಲಿಂದ ಮಲೆನಾಡಿನ ಮೂಲಕ ಚಿತ್ರದುರ್ಗ ಜಿಲ್ಲೆಯ ಹೊಳಲ್ಕೆರೆ ತಾಲೂಕಿನ ನುಲೇನೂರಿಗೆ ಆಗಮಿಸಿ ಅಲ್ಲಿಯೇ ಜೀವನ ಸಾಗಿಸಿದರು. ಇಂದಿಗೂ ನುಲೇನೂರಿನಲ್ಲಿ ಚಂದಯ್ಯನವರಿಗೆ ಸಂಬಂದ ಪಟ್ಟ ಚಿಕ್ಕ ಮಂಟಪಗಳನ್ನು ಕಾಣಬಹದು ಎಂದರು.ಕಾರ್ಯಕ್ರಮದಲ್ಲಿ ಸದ್ಗುರು ಓಂಕಾರ ಹುಚ್ಚಲಿಂಗಸ್ವಾಮೀಜಿ, ಈಚಲನಾಗೇನಹಳ್ಳಿಯ ಗೋವಿಂದ ಸ್ವಾಮೀಜಿ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಎಸ್.ಜೆ.ಕುಮಾರಸ್ವಾಮಿ, ಕೊರಚ ಮಹಾ ಸಂಘದ ರಾಜ್ಯಧ್ಯಕ್ಷ ಹೆಚ್.ಎನ್.ರಾಮಚಂದ್ರಪ್ಪ, ಜಿಲ್ಲಾ ಅಧ್ಯಕ್ಷ ಕುಮಾರ್, ಕೊರಮ ಸಮಾಜದ ಜಿಲ್ಲಾಧ್ಯಕ್ಷ ಕೆ.ಕೃಷ್ಣಪ್ಪ, ಕೊರಚ ಸಮಾಜದ ಪ್ರಧಾನ ಕಾರ್ಯದರ್ಶಿಗಳಾದ ಧನಂಜಯ ಎನ್. ಹಾಗೂ ದ್ವಾರಕನಾಥ್ ಉಪಸ್ಥಿತರಿದ್ದರು.

**ಭವ್ಯ ಮೆರವಣಿಗೆ:** ವೇದಿಕೆ ಕಾರ್ಯಕ್ರಮಕ್ಕೂ ಮುನ್ನ ಮಡಿವಾಳ ಗುರುಪೀಠದ ಬಸವ ಮಾಚಿದೇವ ಮಹಾಸ್ವಾಮಿಯವರು ನಗರದ ನೀಲಕಂಠೇಶ್ವರ ದೇವಸ್ಥಾನದ ಬಳಿ ಶಿವಶರಣ ಶ್ರೀ ನುಲಿಯ ಚಂದಯ್ಯನವರ ಭಾವಚಿತ್ರದ ಮೆರವಣಿಗೆಗೆ ಚಾಲನೆ ನೀಡಿದರು.

ಮೆರವಣಿಗೆಯಲ್ಲಿ ಪೂರ್ಣಕುಂಭ ಹೊತ್ತ ಮಹಿಳೆಯರು ಹಾಗೂ ಕಲಾ ತಂಡಗಳು ಭಾಗವಹಿಸಿದ್ದವು. ಗಾಂಧಿ ವೃತ್ತ, ಎಸ್.ಬಿ.ಐ. ವೃತ್ತ, ಅಂಬೇಡಕರ್ ವೃತ್ತ ಮೂಲಕ ಮೆರವಣಿಗೆ ತರಾಸು ರಂಗಮಂದಿರ ತಲುಪಿತು.

# ನಾರಾಯಣ ಗುರುಗಳು ಸಾಮಾಜಿಕ ಪರಿವರ್ತನೆ ಹರಿಕಾರ: ಡಾ.ವೆಂಕಟೇಶ್

» **ದಾವಣಗೆರೆ**

ಬ್ರಹ್ಮಶ್ರೀ ನಾರಾಯಣ ಗುರುಗಳ ತತ್ವದರ್ಶಗಳನ್ನು ಚಾಚು ತಪ್ಪದೇ ಜೀವನದಲ್ಲಿ ಅಳವಡಿಸಿಕೊಂಡಾಗ ಮಾತ್ರ ಉತ್ತಮ ಹಾಗೂ ಸದೃಢ ಸಮಾಜವನ್ನು ನಿರ್ಮಾಣ ಮಾಡಲು ಸಾಧ್ಯ ಎಂದು ಜಿಲ್ಲಾಧಿಕಾರಿ ಡಾ. ವೆಂಕಟೇಶ್ ಎಂ.ವಿ ತಿಳಿಸಿದರು.

ಗುರುವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಮಹಾನಗರ ಪಾಲಿಕೆ ಹಾಗೂ ಜಿಲ್ಲಾ ಆರ್ಯ ಇಡಿಗ ಸಮಾಜ ಇವರ ಸಹಯೋಗದೊಂದಿಗೆ ಜಿಲ್ಲಾಡಳಿತ ಭವನದ ತುಂಗಭದ್ರಾ ಸಭಾಂಗಣದಲ್ಲಿ ಜರುಗಿದ ಬ್ರಹ್ಮಶ್ರೀ ನಾರಾಯಣಗುರು ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.




ಪುರಾತನ ಕಾಲದಿಂದಲೂ ಹಲವಾರು ತಳ ಸಮುದಾಯದವರು ನಿರಂತರ ಶೋಷಣೆಗೆ ಒಳಗಾಗಿದ್ದು, ಶೋಷಣೆಯ ವಿರುದ್ಧ ಬಲವಾದ ಧ್ವನಿ ಎತ್ತಿ ಹಾಗೂ ಸಮಾಜದಲ್ಲಿ ಬದಲಾವಣೆ ತರುವಲ್ಲಿ ನಾರಾಯಣ ಗುರುಗಳ ಪಾತ್ರ ಬಹು ಮುಖ್ಯವಾದದ್ದು. ಒಂದೇ ಜಾತಿ, ಒಂದೇ ಧರ್ಮ, ಒಬ್ಬ ಮಾನವ ಎಂಬ ಘೋಷವಾಕ್ಯದೊಂದಿಗೆ ಸಮಾಜವನ್ನು ಪರಿವರ್ತನೆ ಮಾಡುವಲ್ಲಿ ಶ್ರಮಿಸಿದವರು.

ಮೇಲ್ವರ್ಗದವರಿಂದ ತುಳಿತಕ್ಕೊಳಗಾದ ಎಲ್ಲಾ ಸಮುದಾಯಗಳು ಶಿಕ್ಷಣ, ಸಂಘಟನೆ, ವ್ಯಾಪಾರ ವಹಿವಾಟು, ಕೃಷಿಯಲ್ಲಿ ತಾಂತ್ರಿಕತೆ ಹಾಗೂ ಗ್ರಾಮೀಣ ಸಂಪ್ರದಾಯಗಳನ್ನು ಉಳಿಸಿ ಬೆಳೆಸುವಂತಹ ಕಾರ್ಯವಾಗಬೇಕು.

ನಾರಾಯಣ ಗುರುಗಳು ಮೂಢನಂಬಿಕೆ,



ಜಾತೀಯತೆ, ಅಸ್ಪೃಶ್ಯತೆ, ದೇವದಾಸಿ ಪದ್ಧತಿ, ಬೆತ್ತಲೆಸೇವೆ, ಬಾಲ್ಯವಿವಾಹ, ಗುಲಾಮಗಿರಿ, ಜೀತ ಪದ್ಧತಿ, ಜಮೀನ್ದಾರಿ ಪದ್ಧತಿ ಹಾಗೂ ಮೊದಲಾದ ಅನಿಷ್ಟ ಪದ್ಧತಿಗಳಿಗೆ ವಿದಾಯ ಹೇಳಿದವರು ಎಂದರು.

ನೃತ್ಯ ಪ್ರದರ್ಶನ: ಹರಿಹರದ ವಿದುಷಿ ನೃತ್ಯ ಶಾಲೆಯ ವಿದ್ಯಾರ್ಥಿಗಳು ಬ್ರಹ್ಮಶ್ರೀ ನಾರಾಯಣಗುರುಗಳ ಜೀವನ ಚರಿತ್ರೆ ಕುರಿತು ನೃತ್ಯ ಪ್ರದರ್ಶಿಸಿದರು.

ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಕೃಷ್ಣ ನಾಯ್ಕ್, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಉಪ ನಿರ್ದೇಶಕಿ ವಾ ಸಂತಿ ಉಪ್ಪಾರ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ರವಿಚಂದ್ರ, ರುದ್ರಪ್ಪ ಎನ್, ಮಾರುತಿ ಶಾಲೆಮನೆ, ಆರ್ಯ ಈಡಿಗ ಸಮಾಜದ ಜಿಲ್ಲಾ ಅಧ್ಯಕ್ಷ ಹೆಚ್. ಶಂಕರ್, ಸಮಾಜದ ಮುಖಂಡರು ಉಪಸ್ಥಿತರಿದ್ದರು.

## ಮುಕ್ತಿಧಾಮದಲ್ಲಿ ಅರಣ್ಯೀಕರಣ ಕಾರ್ಯಕ್ರಮದಡಿಯಲ್ಲಿ ಸಸಿ ನಾಟಿ



» **ಹೊಳಲ್ಕೆರೆ**

ಶ್ರೀ.ಕ್ಷೇ.ಧ.ಗ್ರಾ.ಯೋ.ಬಿ.ಸಿ.ಟ್ರಸ್ಟ್ ಯೋಜನೆಯ ವತಿಯಿಂದ ಹೊಳಲ್ಕೆರೆ ತಾಲೂಕಿನಲ್ಲಿ ತಾಳ್ಯ ವಲಯದ ಸಿರಪ್ಪನಹಳ್ಳಿಯ ಮುಕ್ತಿಧಾಮದಲ್ಲಿ ಸಾಮಾಜಿಕ ಅರಣ್ಯೀಕರಣ ಕಾರ್ಯಕ್ರಮದಡಿಯಲ್ಲಿ ಸಸಿ ನಾಟಿ ಮಾಡಲಾಯಿತು. ಹೊಳಲ್ಕೆರೆ ತಾಲೂಕು ಉಪವಲಯ ಅರಣ್ಯೀಕರಣಾಧಿಕಾರಿ ಆಶಾ ಆರ್. ಇವರು ಸಸಿ ನಾಟಿ ಮಾಡುವುದರ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಜಿಲ್ಲಾ ನಿರ್ದೇಶಕ ದಿನೇಶ್ ಪೂಜಾರಿ ಮಾತನಾಡಿ, ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯಡಿಯಲ್ಲಿ ರಾಜ್ಯದ ಪ್ರತಿ ತಾಲೂಕಿನಲ್ಲಿ 5000 ಸಸಿಗಳನ್ನು ಬೆಳೆಸುವ ಗುರಿಯನ್ನು ಹೊಂದಲಾಗಿದೆ. ಪರಿಸರ ಉಳಿದರೇ ಮಾತ್ರ ಮುಂದಿನ ನಮ್ಮ ಪೀಳಿಗೆಗೆ ಉಳಿಯುತ್ತದೆ. ತೇಗ ಹೊಂಗೆ, ಮಹಾಗನಿ, ಪೇರ್ಲ್ಯಾಲೆ, ನೇರಳೆ ಸಸಿಗಳನ್ನು ಮುಕ್ತಿಧಾಮದಲ್ಲಿ ನಾಟಿ ಮಾಡಲಾಗಿದೆ. ಹಣ್ಣಿನ ಮರಗಳನ್ನು ಬೆಳೆಸುವುದರಿಂದ ಪ್ರಾಣಿ ಪಕ್ಷಿಗಳಿಗೆ ಅನುಕೂಲವಾಗುತ್ತದೆ. ಹಿಂದಿನ ಜೂನ್ ಆಗಸ್ಟ್ ತಿಂಗಳಲ್ಲಿ ಮಳೆಯ ಪ್ರಮಾಣ ಹೆಚ್ಚಿಗೆ ಇರುತ್ತಿತ್ತು. ಆದರೆ ಇವತ್ತಿನ ದಿನಗಳಲ್ಲಿ ಈ ಜೂನ್ ಆಗಸ್ಟ್ ತಿಂಗಳಲ್ಲಿ ಮಳೆಯ ಕೊರತೆ ಎದ್ದುಕಾಣುತ್ತಿದೆ. ಈ ದಿನ ನಾಟಿ ಮಾಡಿದ ಸಸಿಗಳನ್ನು ಊರಿನ ಗ್ರಾಮಸ್ಥರು ಸಸಿಗಳಿಗೆ ನೀರು ಹಾಕಿ ಪೋಷಣೆ, ಪಾಲನೆ ಮಾಡುವುದು. ಆದ್ದರಿಂದ ನಾವೆಲ್ಲರು ಪರಿಸರವನ್ನು ಕಾಪಾಡಿಕೊಳ್ಳುವುದು ನಮ್ಮ ಆದ್ಯ ಕರ್ತವ್ಯ ಆಗಿರುತ್ತದೆಂದು ಹೇಳಿದರು.

ತಾಲೂಕಿನ ಯೋಜನಾಧಿಕಾರಿ ಪ್ರಭಾಕರ್, ಊರಿನ ಮುಖಂಡರಾದ ಮಂಜುನಾಥ್, ರಾಮಚಂದ್ರಪ್ಪ, ಒಕ್ಕೂಟದ ಅಧ್ಯಕ್ಷರಾದ ಶಾಂತಮ್ಮ, ಕೃಷಿ ಮೇಲ್ವಿಚಾರಕರು, ಸ್ವಸಹಾಯ ಸಂಘದ ಸದಸ್ಯರು, ಪ್ರಗತಿಬಂಧು ತಂಡದ ಸದಸ್ಯರು, ಸೇವಾಪ್ರತಿನಿಧಿಗಳು ಉಪಸ್ಥಿತರಿದ್ದರು.

## ಪ್ರಮುಖ ಸುದ್ದಿ

### ಬ್ರಹ್ಮಶ್ರೀ ನಾರಾಯಣಗುರು ಜಯಂತಿಯಲ್ಲಿ ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ

# ಸಮಾಜಕ್ಕಾಗಿ ಬದುಕಿದವರು ನಾರಾಯಣ ಗುರುಗಳು

» **ಚಿತ್ರದುರ್ಗ**

ಕೇರಳದ ಬಸವಣ್ಣ ಎಂದೇ ಪ್ರಖ್ಯಾತಿ ಪಡೆದ ಬ್ರಹ್ಮಶ್ರೀ ನಾರಾಯಣ ಗುರುಗಳು ತಮ್ಮ ಜೀವನವನ್ನು ಸಮಾಜಕ್ಕಾಗಿ ಮುಡಿಪಾಗಿಟ್ಟವರು ಎಂದು ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಹೇಳಿದರು.

ನಗರದ ಚಳ್ಳಕೆರೆ ರಸ್ತೆಯ ಆರ್ಯ ಈಡಿಗರ ವಿದ್ಯಾರ್ಥಿ ನಿಲಯದಲ್ಲಿ ಗುರುವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ವತಿಯಿಂದ ಆಯೋಜಿಸಿದ್ದ ಬ್ರಹ್ಮಶ್ರೀ ನಾರಾಯಣಗುರು ಜಯಂತಿ ಆಚರಣೆ ಸಮಾರಂಭದಲ್ಲಿ ಅವರು ಮಾತನಾಡಿದರು.

"ಒಂದೇ ಜಾತಿ, ಒಂದೇ ಮತ, ಒಂದೇ ದೇವರು" ಎಂಬ ಬ್ರಹ್ಮಶ್ರೀ ನಾರಾಯಣ ಗುರುಗಳ ದೊಡ್ಡ ಮಾತನ್ನು ನಾವೆಲ್ಲರೂ ಪಾಲಿಸಬೇಕಿದೆ. ಬ್ರಹ್ಮಶ್ರೀ ನಾರಾಯಣ ಗುರುಗಳು ಅಂದಿನ ಕಾಲದಲ್ಲಿ ಕೆಳಜಾತಿಯವರ ಮೇಲೆ ಆಗುತ್ತಿರುವ ದೌರ್ಜನ್ಯಗಳು, ಹೆಣ್ಣು ಮಕ್ಕಳ ಮೇಲೆ ವಿಧಿಸಿರುವ ನಿಬಂಧನೆಗಳನ್ನು ಅಹಿಂಸಾತ್ಮಕವಾಗಿ ವಿರೋಧಿಸಿ, ಮಾನವಕುಲ ಒಂದೇ ಎಂಬ ಸಿದ್ಧಾಂತವನ್ನು ಸಮಾಜಕ್ಕೆ ನೀಡಿದವರು. ಇಂತಹ ಮಹನೀಯರ ವಿಚಾರಧಾರೆಗಳನ್ನು ಮುಂದಿನ ದಿನಗಳಲ್ಲಿ ಪಠ್ಯಪುಸ್ತಕದಲ್ಲಿ ಸೇರಿಸಬೇಕಿದೆ ಎಂದು ಅಭಿಪ್ರಾಯಪಟ್ಟರು.



ಅಪರ ಜಿಲ್ಲಾಧಿಕಾರಿ ಬಿ.ಟಿ. ಕುಮಾರಸ್ವಾಮಿ ಮಾತನಾಡಿ, ಮಹನೀಯರ ಜಯಂತಿಗಳನ್ನು ಕೇವಲ ಒಂದು ಜಾತಿಗೆ ಸೀಮಿತಗೊಳಿಸಬಾರದು. ನಾರಾಯಣ ಗುರುಗಳ ವಿಚಾರಧಾರೆಗಳಿಗೆ ಪ್ರತಿಯೊಬ್ಬರು ಆಕರ್ಷಿತರಾಗುತ್ತಾರೆ. ಅವರು ಮೌನಕ್ರಾಂತಿಯ ಮೂಲಕ ಸಮಾಜದ ಅರಿವು ಮತ್ತು ಉತ್ತಮ ಸಂದೇಶಗಳನ್ನು ನೀಡಿ, ಸಮಾಜವನ್ನು ಪರಿವರ್ತನೆಗೆ ತಂದವರು ನಾರಾಯಣಗುರುಗಳು ಎಂದರು.

ಅನಿಬೆಸೆಂಟ್ ಅವರು ಹೇಳುವಂತೆ ಬ್ರಹ್ಮಶ್ರೀ ನಾರಾಯಣಗುರುಗಳು ಯೋಗದಲ್ಲಿ ಪತಂಜಲಿಗೆ ಸರಿಸಮಾನರು, ಜ್ಞಾನದಲ್ಲಿ ಶಂಕರಾಚಾರ್ಯರಿಗೆ ಸರಿಸಮಾನರು, ಅದೇ ರೀತಿಯಾಗಿ ಮಾನವೀಯತೆಯಲ್ಲಿ ಏಸುಕ್ರಿಸ್ತರಿಗೆ ಸರಿಸಮಾನರು.ಅಷ್ಟೋಂದುದೀರ್ಘಜ್ಞಾನ ಹೊಂದಿದ ಮಹಾನ್ ವ್ಯಕ್ತಿಗಳಾಗಿದ್ದಾರೆ. ಸಾಮಾನ್ಯ ಮನುಷ್ಯರಾಗಿ ಜನ್ಮತಾಳಿ, ಸಂತ ಪದವಿಗೇರಿದವರು ನಾರಾಯಣಗುರುಗಳು ಎಂದರು.ನಾರಾಯಣಗುರು ಅವರ ತತ್ವ ಮತ್ತು ವಿಚಾರಗಳನ್ನು ನಾವು ರೂಢಿಸಿಕೊಳ್ಳುವಮೂಲಕತಮ್ಮಮಕ್ಕಳಿಗೂ ತಿಳಿಸಬೇಕು. ಇಂತಹ ಮಹನೀಯರನ್ನು ಪಠ್ಯದ ಮೂಲಕ ಅಧ್ಯಯನ ಮಾಡಬೇಕು ಎಂದು ತಿಳಿಸಿದರು. ಎಸ್‌ಆರ್‌ಎಸ್ ಪಿಯು ಕಾಲೇಜಿನ ಪ್ರಾಂಶುಪಾಲ ಈ. ಗಂಗಾಧರ್ ಉಪನ್ಯಾಸ ನೀಡಿ, ನಾರಾಯಣಗುರುಗಳು ಸಾಮಾಜಿಕ ಕಾಳಜಿಯುಳ್ಳವರಾಗಿದ್ದವರು. ಸಮಾಜದ ಅನಿಷ್ಠ ಪದ್ಧತಿ, ತಾರತಮ್ಯ, ಮೂಢನಂಬಿಕೆ, ಅಸಮಾನತೆಯ ವಿರುದ್ಧ ಧ್ವನಿ ಎತ್ತಿದ್ದರು. ಶೋಷಣೆಯ ವಿರುದ್ಧ ಹಲವಾರು ಹೋರಾಟಗಳನ್ನು ನಡೆಸಿದರು ಎಂದು ಹೇಳಿದ ಅವರು, ಬ್ರಹ್ಮಶ್ರೀ ನಾರಾಯಣಗುರುಗಳ ತತ್ವ ಹಾಗೂ ಆದರ್ಶಗಳನ್ನು ಪ್ರತಿಯೊಬ್ಬರು ಅಳವಡಿಸಿಕೊಳ್ಳಬೇಕು ಎಂದು ಹೇಳಿದರು. ಇದೇ ಸಂದರ್ಭದಲ್ಲಿ ಬ್ಯಾಡ್ಮಿಂಟನ್ ಕ್ರೀಡೆಯಲ್ಲಿ ರಾಷ್ಟ್ರಮಟ್ಟಕ್ಕೆ ಆಯ್ಕೆಯಾದ ಆರ್.ದಿಶಾ ವಿದ್ಯಾರ್ಥಿನಿಗೆ ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಎಸ್. ಕೆ. ಮಲ್ಲಿಕಾರ್ಜುನ್, ಆರ್ಯ ಈಡಿಗರ ಸಮಾಜದ ಜಿಲ್ಲಾ ಅಧ್ಯಕ್ಷ ಹೆಚ್.ಜೀವನ್, ಕಾರ್ಯದರ್ಶಿ ಟಿ.ಮಂಜುನಾಥ್, ನಗರಸಭೆ ಸದಸ್ಯೆ ಅನುರಾಧ ಇದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T